# ಹಂಪಿ ಟೈಮ್ಸ್
HAMPI TIMES

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

ಕನ್ನಡ ದಿನಪತ್ರಿಕೆ
KANNADA DAILY

ಸಂಪುಟ:01 Volume:01 • ಸಂಚಿಕೆ:196 Issue:196 • ನೋಂದಣಿ ನಂ.:KARKAN27911 Reg.No:KARKAN27911 • ವಿಜಯನಗರ VIJAYANAGARA • 29.12.2023 • ಶುಕ್ರವಾರ Friday • ಪುಟ:04 Page:04 • ಬೆಲೆ:2 Rs:2










# ಮೇವು ಖರೀದಿ ಆರಂಭಿಸಿ

## ಶಾಸಕ ಎಚ್. ಆರ್.ಗವಿಯಪ್ಪ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ | ಟಾಸ್ಕ್ ಫೋರ್ಸ್ ಸಭೆ



**ಹಂಪಿ ಟೈಮ್ಸ್ ಹೊಸಪೇಟೆ**

ಸದ್ಯ ಬರಗಾಲ ಆವರಿಸಿದ್ದರಿಂದ ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವು ಒದಗಿಸುಲು ಇಂದಿನಿಂದಲೇ ಪೂರ್ವ ಸಿದ್ಧತೆಗೆ ಅಣಿಯಾಗಬೇಕು ಎಂದು ಶಾಸಕ ಎಚ್. ಆರ್. ಗವಿಯಪ್ಪ ಕಟ್ಟುನಿಟ್ಟಿನ ಸೂಚನೆ ನಿಡಿದರು.

ನಗರದ ತಾ.ಪಂ. ಸಭಾಂಗಭದಲ್ಲಿ ಗುರುವಾರ ಏರ್ಪಡಿಸಿದ್ದ ತಾಲೂಕು ಮಟ್ಟದ ಟಾಸ್ಕ್ ಪೋರ್ಸ್ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಪ್ರಸಕ್ತ ಸಾಲಿನಲ್ಲಿ ಮುಂಗಾರು ಮತ್ತು ಹಿಂಗಾರು ಮಳೆ ವೈಫಲ್ಯದಿಂದ ತುಂಗಭದ್ರ ಜಲಾಶಯದಲ್ಲೂ ನೀರಿಲ್ಲ. ಬೋರ್‌ವೆಲ್‌ಗಳ ಅಂತರ್ಜಲ ಮಟ್ಟವೂ ಕುಸಿಯುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದ ಅವರು, ಮುಂಜಾಗ್ರತಾ ಕ್ರಮವಾಗಿ ತಾಲೂಕು ವ್ಯಾಪ್ತಿಯಲ್ಲಿರುವ ಸಮಸ್ಯಾತ್ಮಕ ಗ್ರಾಮಗಳನ್ನು ಗುರುತಿಸಬೇಕು. ತಕ್ಷಣವೇ ಮೇವು ಖರೀದಿಗೆ ಟೆಂಡರ್ ಪ್ರಕ್ರಿಯೆ ಆರಂಭಿಸುವಂತೆ ಸಂಬಂಧಿಸಿ ಅಧಿಕಾರಿಗಳಿಗೆ ಆದೇಶಿಸಿದರು.

ಇದಕ್ಕೂ ಮುನ್ನ ಮಾತನಾಡಿದ ಹೊಸಪೇಟೆ ನಗರಸಭೆ ಎಇಇ ಸತೀಶ್, 19 ಒಎಚ್‌ಟಿಗಳಿಂದ ನಗರದ 35 ವಾರ್ಡ್‌ಗಳಿಗೆ ನೀರು ಪೂರೈಕೆಗೆ ಸಮಸ್ಯೆಯಾಗುತ್ತಿದೆ. ಹೀಗಾಗಿ ಎರಡು ಒಎಚ್‌ಟಿಗಳ ನಿರ್ಮಾಣಕ್ಕೆ ನಗರಾಭಿವೃದ್ಧಿ ಕೋಶಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ಕೆಲವೆಡೆ 24/7 ಪೈಪ್ ಲೈನ್ ಲಿಂಕೇಜ್ ಅಪೂರ್ಣಗೊಂಡಿದ್ದರಿಂದ ನಗರಸಭೆಯಿಂದ ನಿರ್ವಹಿಸಲಾಗುತ್ತಿದೆ. ಸದ್ಯ ಸಿದ್ಧಲಿಂಗಪ್ಪ ಚೌಕಿ ಮತ್ತು 88 ಮುದ್ಲಾಪುರದಲ್ಲಿ ಕುಡಿಯುವ ನೀರಿನ ಸಮಸ್ಯೆಯಿದೆ ಎಂದು ಸಭೆಗೆ ವಿವರಿಸಿದರು.

ಸದ್ಯ ರಾಜಾಪುರ, ಕಲ್ಲಹಳ್ಳಿಯಲ್ಲಿ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆದು ನೀರು ಒದಗಿಸಲಾಗುತ್ತಿದೆ. ಎಲ್‌ಎಲ್‌ಸಿ ಕಾಲುವೆಯಿಂದ ಕಮಲಾಪುರಕ್ಕೆ ನೀರು ಪಡೆಯುತ್ತಿದ್ದು, ಸದ್ಯಕ್ಕೆ ಸಮಸ್ಯೆಯಿಲ್ಲ. ಬಸವಣ್ಣನ ಕಾಲುವೆ ಕಾಮಗಾರಿ ಸಮಸ್ಯೆಯಿಂದಾಗಿ ಮರಿಯಮ್ಮನಹಳ್ಳಿ ಅಕ್ಕಪಕ್ಕದ ಗ್ರಾಮಗಳಿಗೆ ನೀರಿನ ಸಮಸ್ಯೆಯಾಗಿದೆ. ನಾಗೇನಹಳ್ಳಿ, ಮಲಪನಗುಡಿ, ವೆಂಕಟಾಪುರದಲ್ಲಿ ನೀರಿನ ಸಮಸ್ಯೆಯಾಗಬಹುದಾದ 21 ಗ್ರಾಮಗಳಲ್ಲಿ 52 ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಿದೆ ಎಂದು ಸಂಬಂಧಿಸಿದ ಅಧಿಕಾರಿಗಳು ಮಾಹಿತಿ ನೀಡಿದರು. ಸಭೆಯಲ್ಲಿ ತಹಸೀಲ್ದಾರ್ ವಿಶ್ವಜೀತ್ ಮೆಹತಾ, ತಾ.ಪಂ. ಇಒ ಎಂ. ಉಮೇಶ ಹಾಗೂ ಗ್ರಾ.ಪಂ. ಪಿಡಿಒ ಹಾಗೂ ಆರ್‌ಡಬ್ಲ್ಯೂಎಸ್ ಅಧಿಕಾರಿಗಳು ಹಾಜರಿದ್ದರು.

# ಆಕಸ್ಮಿಕ ಮಣ್ಣು ಕುಸಿದು ಸ್ಥಳದಲ್ಲಿಯೇ ವ್ಯಕ್ತಿ ಮೃತ

**ಹಂಪಿ ಟೈಮ್ಸ್ ಕೊಟ್ಟೂರು**

ತಾಲೂಕಿನ ಕಾಳಾಪುರ ಗ್ರಾಮದ ರೈತ ಜಂಬಣ್ಣ 39 ವರ್ಷ, ಸ್ವಂತ ಮನೆ ನಿರ್ಮಾಣಕ್ಕೆ, ಹಳ್ಳದಲ್ಲಿ ಮರಳು ತರಲು ಹೋಗಿ, ಮರಳು ತುಂಬುವಾಗ ಆಕಸ್ಮಿಕವಾಗಿ ಮಣ್ಣು ಕುಸಿದು, ಉಸಿರು ಗಟ್ಟಿ ಸ್ಥಳದಲ್ಲಿಯೇ ಮೃತಪಟ್ಟಿರುವ ಬಗ್ಗೆ ಕೊಟ್ಟೂರು ಠಾಣೆಯಲ್ಲಿ ಗುರುವಾರ ದೂರು ದಾಖಲಾಗಿದೆ.

ಮೃತನ ಪತ್ನಿ ಶಾರದಮ್ಮ ತನ್ನ ಗಂಡ ಜಂಬಣ್ಣ ವ್ಯವಸಾಯ ಮತ್ತು ಕೂಲಿ ಕೆಲಸ ಮಾಡಿಕೊಂಡಿದ್ದು ಸ್ವಂತ ಮನೆ ಇಲ್ಲದ ಕಾರಣ, ತಮ್ಮದೇ ಸೂರು ನಿರ್ಮಾಣಕ್ಕೆ ಮರಳಿಗಾಗಿ ಗುರುವಾರ ಪಕ್ಕದ ನಡುಮಾವಿನಹಳ್ಳಿ ಗ್ರಾಮದ ಹಳ್ಳಕ್ಕೆ, ಎತ್ತಿನ ಬಂಡಿಯಲ್ಲಿ ಮರಳು ತರಲು >>4

# ವಿಜಯನಗರ ಜಿಲ್ಲೆಯಲ್ಲಿ 9 ಕರೋನ ಪಾಸಿಟಿವ್

**ಹಂಪಿ ಟೈಮ್ಸ್ ಹೊಸಪೇಟೆ**

ವಿಜಯನಗರ ಜಿಲ್ಲೆಯಲ್ಲಿ ಗುರುವಾರ 6 ಜನರಿಗೆ ಕರೋನಾ ಪಾಸಿಟಿವ್ ಪತ್ತೆಯಾಗಿರುವುದು ಸೇರಿ ಒಟ್ಟು
9 ಕ್ಕೆರಿದ ಕರೊನಾ ಪ್ರಕರಣಗಳಿವೆ. ಸಾರ್ವಜನಿಕರು ಭಯಪಡೆದೆ ಮುನ್ನಚ್ಚೆರಿಕೆ ಕ್ರಮಗಳನ್ನು ಪಾಲಿಸಬೇಕು ಎಂದು ಡಿಎಚ್‌ಒ ಶಂಕರ ನಾಯ್ಕ ತಿಳಿಸಿದ್ದಾರೆ.
ಬೆಂಗಳೂರಿನಲಿ 414, ಮೈಸೂರು 35 ಸೇರಿದಂತೆ ರಾಜ್ಯದಲ್ಲಿ ಒಟ್ಟು 568 ಕರೋನ ಪಾಸಿಟಿವ್ ಪತ್ತೆಯಾಗಿದೆ. 8350 ಜನರಿಗೆ ಟೆಸ್ಟಿಂಗ್ ಮಾಡಲಾಗಿದ್ದು ಶೇ.6 ರಷ್ಟು ಜನರಲ್ಲಿ ಕರೋನ ಪತ್ತೆಯಾಗಿದೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ.





**ಹೊಲ, ಗೋಡನ್ ಬಾಡಿಗೆಗೆ/ಲೀಸ್‌ಗೆ ಲಭ್ಯ**

ಹೊಸಪೇಟೆ ತಾಲೂಕಿನ ನಾಗೇನಹಳ್ಳಿಯಲ್ಲಿ ಬೋರ್‌ವೆಲ್ ನೀರು ಸಹಿತ 2 ಎಕರೆ ಹೊಲ ಮತ್ತು 25X60 ಚ.ಅಡಿ. 15 ಅಡಿ ಎತ್ತರ ಇರುವ ಗೋಡನ್ ಬಾಡಿಗೆ / ಲೀಸ್ ಕೊಡಲಾಗುವುದು. ಆಸಕ್ತರು ಸಂಪರ್ಕಿಸಿ.

**9448493553**


**ಮೈಕ್ರೋ ನ್ಯೂಸ್**

## ಹಂಪಿ ಉತ್ಸವ: ಲೋಗೋ ರಚನೆಗೆ ಅವಕಾಶ

**ಹಂಪಿ ಟೈಮ್ಸ್ ಹೊಸಪೇಟೆ**

2024ರ ಫೆಬ್ರವರಿಯಲ್ಲಿ ನಡೆಯುವ ಹಂಪಿ ಉತ್ಸವದಲಾಂಛನ ರಚನೆಗಾಗಿ ಕಲಾವಿದರಿಗೆ ಅವಕಾಶ ಕಲ್ಪಿಸಲಾಗಿದೆ. ಹಂಪಿ ಉತ್ಸವವು ಫೆಬ್ರವರಿ 2, 3 ಮತ್ತು 4 ರಂದು ನಡೆಯುತ್ತದೆ. ಈ ಉತ್ಸವದ ಲೋಗೋರಚಿಸಿ, ಜನವರಿ 2ರೊಳಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಆಯ್ಕೆಯಾದ ಲೋಗೋರಚಿಸಿದ ಕಲಾವಿದರಿಗೆ ಆಕರ್ಷಕ ಬಹುಮಾನ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ತಿಳಿಸಿದ್ದಾರೆ.

## ಸಿಎಂ ಸಿದ್ಧರಾಮಯ್ಯ ಪ್ರವಾಸ

**ಹಂಪಿ ಟೈಮ್ಸ್ ಕೊಪ್ಪಳ**

ಡಿಸೆಂಬರ್ 30 ರಂದು ರಾಯಚೂರು ಜಿಲ್ಲೆಯ ಪ್ರವಾಸದಲ್ಲಿರುವ ಸಿಎಂ



ಸಿದ್ಧರಾಮಯ್ಯ ಅವರು ಅಂದು ಬೆಳಗ್ಗೆ ಕೊಪ್ಪಳ ಜಿಲ್ಲೆಯ ಗಿಣಿಗೇರಾ ಏರ್‌ಸ್ಟ್ರಿಪ್ ಮೂಲಕ ರಾಯಚೂರು ಜಿಲ್ಲೆಗೆ ತೆರಳಲಿದ್ದಾರೆ.
ಅಂದು ಬೆಳಗ್ಗೆ 10.20ಕ್ಕೆ ಕೊಪ್ಪಳ ಜಿಲ್ಲೆಯ ಗಿಣಿಗೇರಾ ಏರ್‌ಸ್ಟ್ರಿಪ್‌ಗೆ ಆಗಮಿಸುವರು. ಬೆಳಗ್ಗೆ 10.30ಕ್ಕೆ ಗಿಣಿಗೇರಾ ಏರ್‌ಸ್ಟ್ರಿಪ್‌ನಿಂದ ನಿರ್ಗಮಿಸಿ ರಾಯಚೂರು ಜಿಲ್ಲೆಯ ಸಿಂಧನೂರ ತಾಲೂಕಿನಲ್ಲಿ ನಡೆಯುವ ಕಾರ್ಯಕ್ರಮಗಳಿಗೆ ತೆರಳಲಿದ್ದಾರೆ ಎಂದು ಸಚಿವರ ವಿಶೇಷ ಕರ್ತವ್ಯಾಧಿಕಾರಿ ಕೆ.ಚಿರಂಜೀವಿ ತಿಳಿಸಿದ್ದಾರೆ.

# ವಾಹನ ಡಿಕ್ಕಿ ಯುವಕ ಸ್ಥಳದಲ್ಲಿ ಸಾವು

## ಬೈಕ್ ಸವಾರ ಕೋಟೆಪ್ಪ ಮೃತ | ಮಾಲವಿ ಗ್ರಾಮದ ಜ್ಯೋತಿಯ ಬಲಗೈ ತುಂಡು

**ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**

ತಾಲೂಕಿನ ಬೆಣಕಲ್ಲು ಮತ್ತು ಕೋಗಳಿ ತಾಂಡ ರಸ್ತೆ ಮಾರ್ಗದಲ್ಲಿ ಬುಧವಾರ ಅಪರಿಚಿತ ಸರಕು ಸಾಗಾಣಿಕೆಯ ವಾಹನ ಒಂದು ಬೈಕಿಗೆ ಡಿಕ್ಕಿಯಾಗಿದ್ದು. ಬೈಕ್ ಸವಾರ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಹಿಂಬದಿ ಸವಾರಿಯಲ್ಲಿದ್ದ ಯುವತಿಗೆ ಗಂಭೀರ ಗಾಯವಾಗಿದೆ.

ಪಟ್ಟಣದ ಎಂಬಿ ಕಾಲೋನಿಯ ಕೋಟೆಪ್ಪ (25) ಮೃತಪಟ್ಟ ವ್ಯಕ್ತಿಯಾಗಿದ್ದು. ಹಿಂಬದಿಯಲ್ಲಿ ಕುಳಿತಿದ್ದ ತಾಲೂಕಿನ ಮಾಲವಿ ಗ್ರಾಮದ ಜ್ಯೋತಿಯ ಬಲಗೈ ತುಂಡಾಗಿದೆ. ಹೆಚ್ಚಿನ ಚಿಕಿತ್ಸೆಗಾಗಿ ದಾವಣಗೆರೆಯ ಆಸ್ಪತ್ರೆಗೆ ದಾಖಲಾಗಿದೆ. ಎಂದು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಡಿಕ್ಕಿ ಹೊಡೆದ ಆಪರಿಚಿತ ವಾಹನ ಪತ್ತೆಯಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

# ಅಯ್ಯಪ್ಪಸ್ವಾಮಿ ಪೂಜೋತ್ಸವ ಮೆರವಣಿಗೆ



**ಹಂಪಿ ಟೈಮ್ಸ್ ಮರಿಯಮ್ಮನಹಳ್ಳಿ**

ಇಲ್ಲಿನ ಅಯ್ಯಪ್ಪ ಸ್ವಾಮಿಯ ಮಾಲಾಧಾರಿಗಳಿಂದ ಅಯ್ಯಪ್ಪ ಸ್ವಾಮಿಯ ಮಂಡಲ ಪೂಜೋತ್ಸವ ನಿಮಿತ್ತ ಅಯ್ಯಪ್ಪಸ್ವಾಮಿಯ ಮೆರವಣಿಗೆಯು ಪಟ್ಟಣದ ಶ್ರೀಲಕ್ಷ್ಮೀನಾರಾಯಣಸ್ವಾಮಿ, ಶ್ರೀಆಂಜನೇಯಸ್ವಾಮಿ ದೇವಸ್ಥಾದಿಂದ ಆರಂಭಗೊಂಡು ಮುಖ್ಯಬೀದಿಯಮೂಲಕ ಪಾದಗಟ್ಟಿ ಆಂಜನೇಯ ಸ್ವಾಮಿಯ ವರಗೆ ಅದ್ದೂರಿಯಾಗಿ ನಡೆದು. ಶ್ರೀಆಂಜನೇಯಸ್ವಾಮಿ ದೇವಸ್ಥಾದಲ್ಲಿ ಸಂಪನ್ನಗೊಂಡಿತು. ಅಯ್ಯಪ್ಪಸ್ವಾಮಿ ಮಾಲಾಧಾರಿಗಳಿಂದ ಭಜನೆ, ವಿಶೇಷ ಪೂಜಾಕೈಂಕರ್ಯಗಳು ಜರುಗಿದವು. ಈ ವರ್ಷ 18ನೇ ವರ್ಷದ ಯಾತ್ರೆಯ ಸ್ವಾಮಿಗಳಿಗೆ ಈ ಸಂಧರ್ಭದಲ್ಲಿ ಗೌರವಿಸಲಾಯಿತು. ಮಹಾಪೂಜೆಯಾದ ನಂತರ ಭಕ್ತರಿಗೆ ಅನ್ನ ಪ್ರಸಾದ ವಿತರಣೆಯನ್ನು ಹಮ್ಮಿಕೊಳ್ಳಲಾಗಿತ್ತು. ಪೂಜಾ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಗುರುಸ್ವಾಮಿಗಳಾದ ವೀರೇಶ್ವರಸ್ವಾಮಿ, ಕುರಿ ಶಿವಮೂರ್ತಿಸ್ವಾಮಿ, ಶೀನಪ್ಪಸ್ವಾಮಿ, ಪಂಪಾಪತಿಸ್ವಾಮಿ, ಚಿದಂಬರಮೂರ್ತಿ, ಬ್ರಹ್ಮಾನಂದಸ್ವಾಮಿ ಸೇರಿದಂತೆ ಅಯ್ಯಪ್ಪ ಮಾಲಾಧಾರಿಗಳು, ಸಾರ್ವಜನಿಕರ ಭಕ್ತಾಧಿಗಳು ಇದ್ದರು.

# ಕಾಂಗ್ರೆಸ್‌ನಿಂದ ದಲಿತರಿಗೆ ಅನ್ಯಾಯ

## ಬಿಜೆಪಿ ಪರಾಜಿತ ಅಭ್ಯರ್ಥಿ ಬಲ್ಲಾಹುಣ್ಸಿ ರಾಮಣ್ಣ ಆರೋಪ



**ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**

ಕಾಂಗ್ರೆಸ್ ಪಕ್ಷವೇ ನಮ್ಮ ಸರ್ವಸ್ವ ಎಂದು ನಂಬಿಕೊಂಡು ಬಂದ ದಲಿತ ಸಮುದಾಯವನ್ನು ಹಿಡಿತದಲ್ಲಿಟ್ಟುಕೊಳ್ಳಬೇಕು ಎನ್ನುವ ಹುನ್ನಾರದಿಂದ, ಅದರ ಅನೇಕ ತಪ್ಪು ತೀರ್ಮಾನಗಳೇ ಮಾದಿಗ ಸಮುದಾಯವನ್ನು ಇಂದಿಗೂ ಸಂಕಷ್ಟಕ್ಕೆ ಸಿಲುಕಿಸಿದೆ ಎಂದು ಬಿಜೆಪಿ ಪರಾಜಿತ ಅಭ್ಯರ್ಥಿ ಬಲ್ಲಾಹುಣ್ಸಿ ರಾಮಣ್ಣ ಬೇಸರ ವ್ಯಕ್ತಪಡಿಸಿದರು.
ಪಟ್ಟಣದ ಕನ್ನಿಕಾಪರಮೇಶ್ವರಿ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಮಾದಿಗರ ಆತ್ಮಗೌರವ ಸಮಾವೇಶ ಕಾರ್ಯಕ್ರಮದಲ್ಲಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ಡಾ.ಬಿ.ಆರ್.ಅಂಬೇಡ್ಕರ್ ದಲಿತರಿಗೆ ದ್ವಿಮತದಾನ ಪದ್ಧತಿ ಜಾರಿಗೊಳಿಸಿ, ಪ್ರಾಂತೀಯವಾಗಿ ದಲಿತರನ್ನು ದಲಿತರೇ ಆಯ್ಕೆಮಾಡಿಕೊಳ್ಳವ ಮತ್ತು ಇನ್ನೊಂದು ಮತದಿಂದ ಸರ್ವಣೀಯ ಆಯ್ಕೆ ಮಾಡುವ ಸ್ವಾತಂತ್ರ್ಯ ನೀಡುವ ಪದ್ಧತಿಯನ್ನು ಜಾರಿಗೊಳಿಸಲು ಒತ್ತಾಯಿಸಿದಾಗ ಕಾಂಗ್ರೆಸ್‌ನ ನಾಯಕರಾದ ಮಹಾತ್ಮ ಗಾಂಧೀಜಿ, ಜವಾಹರ ಲಾಲ್ ನೆಹರು ವಿರೋಧಿಸಿ ಇದರ ವಿರುದ್ಧ ಉಪವಾಸ ಸತ್ಯಾಗ್ರಹ ನಡೆಸಿ ಹೋರಾಟಕ್ಕಿಳಿದು ಕೊನೆಗೆ ಅಂಬೇಡ್ಕರಿಗೆ ಮನವೊಲಿಸಿ ದ್ವಿಮತದಾನ ಹಕ್ಕು ಜಾರಿಯಾಗದಂತೆ ತಡೆದಿದ್ದರು. ನರೇಂದ್ರ ಮೋದಿ ಜೀ ನೇತೃತ್ವದ ಬಿಜೆಪಿ ಮಾದಿಗರಿಗೆ ಒಳ ಮೀಸಲಾತಿ ಜಾರಿಗೊಳಿಸಿ ಸಮುದಾಯಕ್ಕೆ ನ್ಯಾಯ ನೀಡಲು ಮುಂದಾಗಿದ್ದಾರೆ ಎಂದು ಶ್ಲಾಘಿಸಿದರು.
ಹಂಪಿಯ ಮಾತಂಗ ಮಹರ್ಷಿ ಪೀಠದ ಪೂರ್ಣಾನಂದ ಭಾರತಿ ಸ್ವಾಮೀಜಿ ಸಾನ್ನಿಧ್ಯ ವಹಿಸಿ, ಸಮುದಾಯವು ಶೈಕ್ಷಣಿಕ, ಸಾಮಾಜಿಕವಾಗಿ ರಾಜಕೀಯವಾಗಿ ಮುನ್ನಡೆಯಲು ಸದಾಶಿವ ಆಯೋಗ ಜಾರಿ ಆಗಬೇಕಿದೆ. ಪ್ರಮುಖವಾಗಿ ಧಾರ್ಮಿಕ ಮಾರ್ಗದಲ್ಲಿ ಸಾಗಲು ಸಮುದಾಯದಕ್ಕಿ ಕಿವಿಮಾತು ಹೇಳಿದರು. ಅನುಭವ ಮಂಟಪದಂತೆ ಪ್ರಸ್ತುತದಲ್ಲಿ ಎಲ್ಲಾ ರಾಜಕೀಯ ಪಕ್ಷಗಳು ಸೇರಿ ಮಾದಿಗ ಸಮಾಜದ ಅಭಿವೃದ್ಧಿಗೆ ಆದ್ಯತೆ ನೀಡಿ ಕೆಲಸ ಮಾಡಬೇಕು ಎಂದರು.
ಈ ವೇಳೆ ಸಂಸದ ವೈ.ದೇವೆಂದ್ರಪ್ಪ, ಸಾಮಾಜಿಕ ಹೋರಾಟಗಾರ ವಾದಿರಾಜ, ರಾಜ್ಯ ಸಫಾಯಿ ಕರ್ಮಚಾರಿ ನಿಗಮದ ಮಾಜಿ ಅಧ್ಯಕ್ಷ ಹನುಮಂತಪ್ಪ, ಬಿಜೆಪಿ ಬಳ್ಳಾರಿ ವಿಭಾಗೀಯ ಪ್ರಧಾನ ಕಾರ್ಯದರ್ಶಿ ಪೂಜಪ್ಪ ಸೇರಿದಂತೆ ಅನೇಕರು ಮಾತನಾಡಿದರು, ವೇದಿಕೆಯಲ್ಲಿ ಮಾದಿಗ ದಂಡೋರಾದ ಪ್ರಮುಖರಾದ ಬಾಗಲಕೋಟೆಯ ವೈ.ಮುತ್ತಣ್ಣ ಬೆಣ್ಣೂರು, ಗುಗಿಹಾಳ್, ರವಿಚಂದ್ರ ಕಾಂತಿಕಾರ್, ವಿಜಯಪುರದ ಬಾಳಪ್ಪ, ಫರ್ನಾಂಡಿಸ್ ಹಿಪ್ಪಳಗಾಂವ್, ಡಾ.ಬಿ.ಆರ್. ಅಂಬೇಡ್ಕರ್ ಸಂಘದ ವಿಜಯನಗರ ಜಿಲ್ಲಾಧ್ಯಕ್ಷ ಉಮಾಪತಿ, ಕಾರ್ಯಕಾರಿಣಿ ಸದಸ್ಯರು ಕಣವಿಹಳ್ಳಿ ಮಂಜುನಾಥ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸ್.ದುರುಗೇಶ್, ಮುಖಂಡರಾದ ಮಹಾಲಕ್ಷ್ಮೀ, ದಶಮಾಪುರ ಮರಿಯಪ್ಪ ಮತ್ತಿತರರು ಇದ್ದರು.




## ವಚನ ಅರಿವು

# ಅಲ್ಲದ ಬದುಕು ಸಲ್ಲದು

**ನಿಮ್ಮ ನಿಲುವಿಂಗೆ ನೀವು ನಾಚಬೇಡವೆ?**
**ಅನ್ಯರ ಕೈಯಿಂದ ಅಲ್ಲ ಎನಿಸಿಕೊಂಬ ನಡೆನುಡಿ ಏಕೆ?**
**ಅಲ್ಲ ಎನಿಸಿಕೊಂಬುದರಿಂದ ಆ ಕ್ಷಣವೆ**
**ಸಾವುದು ಲೇಸು ಕಾಣಾ ಚೆನ್ನಮಲ್ಲಿಕಾರ್ಜುನಾ.**

**– ಅಕ್ಕಮಹಾದೇವಿ**

ನಾವು ಬದುಕುವ ರೀತಿ ಸರಿ ಇಲ್ಲದಿದ್ದರೆ ನಮ್ಮ ಮನಸ್ಸಿಗೆ ನಾಚಿಕೆ ಬರಬೇಕು. ನಮ್ಮ ನಡೆ ಅಂದರೆ ನಾವು ಬದುಕುವ ರೀತಿ ಸತ್ಯ, ಶುದ್ಧ, ಪ್ರಾಮಾಣಿಕತೆಯಿಂದಿರಬೇಕು. ನಮ್ಮ ನುಡಿ ಅಂದರೆ, ನಾವು ಬದುಕಿದಂತೆ ನುಡಿಯುವುದಾಗಿದೆ. ಒಳ್ಳೆಯ ಜೀವನ ಮಾಡುವುದು ಅದರಂತೆ ನುಡಿಯಬೇಕು. ಹೇಳುವುದೊಂದು ಮಾಡುವುದೊಂದು ಆಗಬಾರದು. ಹೀಗೆ ನಡೆ–ನುಡಿಯಲ್ಲಿ ಶುದ್ಧವಿಲ್ಲದಿದ್ದರೆ ಬೇರೆಯವರು ನಮ್ಮನ್ನು ಕಂಡು ಅಸಹ್ಯ ಪಡುತ್ತಾರೆ. ನಮಗೆ ಯಾವುದೇ ಗೌರವ, ಮಾನ್ಯತೆ ನೀಡುವುದಿಲ್ಲ. ಕೆಟ್ಟದ್ದನ್ನು ಮಾಡುತ್ತ, ಸತ್ಯ, ಶುದ್ಧ, ಪ್ರಾಮಾಣಿಕತೆ, ಒಳ್ಳೆಯ ನಡತೆ ಇಲ್ಲದೆ, ಮಾತಿನಲ್ಲಿ ನೀತಿ ಹೇಳುತ್ತ ಇತರರಿಗೆ ತೊಂದರೆ ಕೊಡುತ್ತ, ನೈತಿಕ ಮೌಲ್ಯಗಳಿಲ್ಲದೆ ಬದುಕಿದರೆ ಬೇರೆಯವರಿಂದ 'ಅಲ್ಲ' ಎನಿಸಿಕೊಳ್ಳಬೇಕಾಗುತ್ತದೆ. ಇಂತಹ ಕೆಟ್ಟ ಬಾಳುವೆ ಬಾಳುವುದಕ್ಕಿಂತ ಸಾಯುವುದೇ ಮೇಲು ಎಂದು ಎಚ್ಚರಿಸುತ್ತದೆ ಅಕ್ಕಮಹಾದೇವಿಯ ಈ ವಚನ.

(ಡಾ. ನಂದೀಶ್ವರ ದಂಡೆ ಅವರ ವಚನ ಜೀವನ ಮಾರ್ಗ ಪುಸ್ತಕದಿಂದ)

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

ಸಂಪಾದಕರು

**ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.**
ಇ–ಮೇಲ್:hampitimes@gmail.com
M: 9448633038

## ಮುಖ್ಯಮಂತ್ರಿಗಳ ಕಾರ್ಯಕ್ರಮ ಅಚ್ಚುಕಟ್ಟಾಗಿರಲಿ: ಎಡಿಸಿ ಡಾ.ಕೆ. ಆರ್ ದುರುಗೇಶ

**ಹಂಪಿ ಟೈಮ್ಸ್ ರಾಯಚೂರು**

ಡಿ.30ರಂದು ಸಿಂಧನೂರು ತಾಲೂಕು ವ್ಯಾಪ್ತಿಯಲ್ಲಿ ವಿವಿಧ ಅಭಿವೃರ್ದಧಿ ಕಾಮಗಾರಿಗಳ ಲೋಕಾರ್ಪಣೆ, ಶಂಕು ಸ್ಥಾಪನೆ ಕಾರ್ಯಕ್ರಮಕ್ಕಾಗಿ ಜಿಲ್ಲೆಯ ಸಿಂದನೂರು ತಾಲೂಕಿಗೆ ರಾಜ್ಯದ ಮುಖ್ಯಮಂತ್ರಿಗಳು ಭೇಟಿ ನೀಡಲಿದ್ದು, ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಮತ್ತು ಯಾವುದೇ ಲೋಪದೋಷಗಳಾಗದಂತೆ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ಕೆ.ಆರ್ ದುರುಗೇಶ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಡಿ.28ರ(ಶುಕ್ರವಾರ) ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗನದಲ್ಲಿ ಹಮ್ಮಿಕೊಂಡಿದ್ದ ಮುಖ್ಯಮಂತ್ರಿಗಳ ಕಾರ್ಯಕ್ರಮದ ಕುರಿತು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.


ಅಂದು ಸಿಂಧನೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣಕ್ಕೆ ಆಗಮಿಸಲಿರುವ ಅವರು ತಾಲೂಕು ವ್ಯಾಪ್ತಿಯಲ್ಲಿರುವ ತಿಮ್ಮಾಪೂರ ಏತ ನೀರಾವರಿ ಯೋಜನೆ ಲೋಕಾರ್ಪಣೆ, ಜಲಜೀವನ್ ಮಿಷನ್ ಯೋಜನೆಗೆ ಶಂಕುಸ್ಥಾಪನೆ, ಸರ್ಕಾರಿ ಪದವಿ ಮಹಾವಿದ್ಯಾಲಯದ ಸುವರ್ಣ ಮಹೋತ್ಸವ ಕಾರ್ಯಕ್ರಮ, ಸೇರಿದಂತೆ ಇನ್ನಿತರರ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದು, ಅಧಿಕಾರಿಗಳು ಈ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ನಡೆಸಿಕೊಂಡು ಹೋಗುವಂತೆ ತಿಳಿಸಿದರು.

ಕಾರ್ಯಕ್ರಮಕ್ಕಾಗಿ ವಾಹನದ ವ್ಯವಸ್ಥೆಯನ್ನು ಸೂಕ್ತ ರೀತಿಯಲ್ಲಿ ಮಾಡಬೇಕು. ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸುವ ನಿಮಿತ್ತ ಸೂಕ್ತ ಆ್ಯಂಬುಲೆನ್ಸ್ ವ್ಯವಸ್ಥೆಯನ್ನು ಹಾಗೂ ವೈದ್ಯಕೀಯ ಸೇವೆಯನ್ನು ಒದಗಿಸುವಂತೆ ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಸೂಕ್ತ ಪೊಲೀಸ್ ಬಿಗಿ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಬೇಕು. ಯಾವುದೇ ಕಾರಣಕ್ಕೂ ವಿದ್ಯುತ್‌ನಲ್ಲಿ ವ್ಯತ್ಯಯ ಕಂಡುಬರದಂತೆ ನೋಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಯುಗದ ಕವಿ ಜಗದ ಕವಿ ಕುವೆಂಪು





**ವೀಣಾ ಹೇಮಂತಗೌಡ ಪಾಟೀಲ್, ಮುಂಡರಗಿ, ಗದಗ**

ವರ್ಷಗಳ ಹಿಂದೆ ಎಲ್ಲೋ ಓದಿದ ನೆನಪು. ಒಂದೇ ಮನೆಯ ಇಬ್ಬರು ಸಾಹಿತಿ ಸಹೋದರರ ನಡುವೆ ನಡೆದ ಮಾತುಕತೆ. ಅದು ಮಧ್ಯಾಹ್ನದ ಊಟದ ಸಮಯ. ಆ ಮನೆಯ ಯಜಮಾನರು ಅತ್ಯಂತ ವಯೋ ವೃದ್ಧರೂ, ಜ್ಞಾನ ವೃದ್ಧರೂ ಆಗಿದ್ದು ತನ್ನ ಇನ್ನೋರ್ವ ಬರಹಗಾರ ಸಹೋದರನನ್ನು ಕುರಿತು ಶ್ರೀ ರಾಮಾಯಣ ದರ್ಶನಂ ಬರೆದ ಕುವೆಂಪು ಅವರು ಬ್ರಾಹ್ಮಣರು ಇರಬೇಕಲ್ಲವೇ ಎಂದು ಪ್ರಶ್ನಿಸಿದರು. ಅದಕ್ಕೆ ಆ ಕಿರಿಯ ಸಹೋದರ ಇದ್ದರೂ ಇರಬಹುದು ಅಣ್ಣ ಎಂದು ಹೇಳಿದರು. ಆಗ ಅವರೊಂದಿಗೆ ಊಟಕ್ಕೆ ಕುಳಿತಿದ್ದ ಇನ್ನೋರ್ವರು ದಿಗ್ಭ್ರಮೆಯಿಂದ ತಲೆಯೆತ್ತಿ ನೋಡಿದರು. ಅವರನ್ನು ಕಣ್ಣಲ್ಲಿಯೇ ಸಮಾಧಾನಿಸಿದ ಕಿರಿಯ ಸಹೋದರ ಊಟವಾದ ನಂತರ ಹೊರಗೆ ಕರೆದೊಯ್ದರು. ನಿಮ್ಮ ಅನುಮಾನ ನಿಜ ಶ್ರೀ ರಾಮಾಯಣ ದರ್ಶನಂ ಮಹಾಕಾವ್ಯವನ್ನು ರಚಿಸಿದ ಕುವೆಂಪು ಅವರು ಬ್ರಾಹ್ಮಣರು ಎಂದು ಅಣ್ಣನವರೊಂದಿಗೆ ನಾನು ಹೇಳಿದ್ದು ತಪ್ಪು... ಆದರೆ ಈ ವಯಸ್ಸಿನಲ್ಲಿ ಅಣ್ಣನವರು ಅಂತಹ ಮಹಾಕಾವ್ಯವನ್ನು ಬ್ರಾಹ್ಮಣರು ಮಾತ್ರ ಬರೆಯಲು ಸಾಧ್ಯ ಎಂಬ ತಿಳುವಳಿಕೆಯನ್ನು ಅಲ್ಲಗಾಣಿಸುವ ಅವಶ್ಯಕತೆ ನನಗೆ ತೋರಲಿಲ್ಲ. ನೀವೇ ಹೇಳಿ ಕುವೆಂಪು ಅವರು ಯಾವ ಬ್ರಾಹ್ಮಣರಿಗಿಂತ, ಯಾವ ಮಹಾಜ್ಞಾನಿಗಿಂತ ಕಡಿಮೆ ಎಂದು ಉತ್ತರಿಸಿದರು. ಅವರ ಮಾತು ಹದಿನಾರಾಣೆ ಸತ್ಯವಾಗಿತ್ತು ಆದ್ದರಿಂದಲೇ ಅವರ ಸಹೋದ್ಯೋಗಿ ಸುಮ್ಮನೆ ತಲೆ ಆಡಿಸಿದರು. ಇಷ್ಟು ಸಾಕಲ್ಲವೇ ವಿಶ್ವಮಾನವ ಖ್ಯಾತಿಯ ಯುಗದ ಕವಿ ಜಗದ ಕವಿ ಎಂದು ಕರೆಯಲ್ಪಟ್ಟ, ರಾಷ್ಟ್ರಕವಿ, ರಸ ಋಷಿ, ಕನ್ನಡಕ್ಕೆ ಮೊಟ್ಟಮೊದಲ ಜ್ಞಾನಪೀಠ ಪ್ರಶಸ್ತಿ ತಂದುಕೊಟ್ಟ ಕುವೆಂಪು ಅವರ ಕುರಿತು ಹೇಳಲು.

ಕುಪ್ಪಳ್ಳಿಯ ವೆಂಕಟಪ್ಪನವರ ಮಗ ಪುಟ್ಟಪ್ಪ ಕುವೆಂಪು ಎಂಬ ಕಾವ್ಯನಾಮದಿಂದ ಜಗದ್ವಿಖ್ಯಾತಿ ಹೊಂದಿದರು.ಕುವೆಂಪು ಅವರ ಮೂಲ ಹೆಸರು ಪುಟ್ಟಪ್ಪ. ತಂದೆ ವೆಂಕಟಪ್ಪ, ತಾಯಿ ಸೀತಮ್ಮ. ಹುಟ್ಟಿದ್ದು ತಾಯಿಯ ತವರೂರಾದ ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ ಹಿರೇಕೊಡಿಗೆಯಲ್ಲಿ. 1904 ಡಿಸೆಂಬರ್ 29ರಂದು. ಕುವೆಂಪು ಅವರ ಬಾಲ್ಯದ ದಿನಗಳನ್ನು ಅವರ ತಂದೆಯ ಊರಾದ ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲೂಕಿನ ಕುಪ್ಪಳ್ಳಿಯಲ್ಲಿ ಕಳೆದರು . ಮಲೆನಾಡಿನ ಸಿರಿ ಸೊಬಗನ್ನು ಹೊಂದಿದ್ದ ಕಾಡು ಬೆಟ್ಟ ಗುಡ್ಡಗಳು ಹಸಿರ ಸಿರಿ ಕುವೆಂಪು ಅವರ ಬಾಲ್ಯವನ್ನು ಸಮೃದ್ಧವಾಗಿಸಿದ್ದವು.

ಪ್ರಾಥಮಿಕ ಶಿಕ್ಷಣ ತೀರ್ಥಹಳ್ಳಿಯಲ್ಲಿ ಪೂರೈಸಿ ಪ್ರೌಢಶಾಲಾ ಶಿಕ್ಷಣದಿಂದ ಹಿಡಿದು ಎಂ.ಎ ಪದವಿಯವರೆಗೂ ಮೈಸೂರಿನಲ್ಲಿ ಓದಿದರು. ಮಹಾರಾಜ ಕಾಲೇಜಿನಲ್ಲಿ ಎಂ ಎ ಮಾಡಿದರು. ತಳುಕಿನ ವೆಂಕಣ್ಣಯ್ಯನವರು ಇವರಿಗೆ ಗುರುಗಳಾಗಿದ್ದರು. ಇವರು ಮೈಸೂರು ವಿಶ್ವವಿದ್ಯಾಲಯ ಮಾನಸಗಂಗೋತ್ರಿಯಲ್ಲಿ ಕನ್ನಡದ ಪ್ರಾಧ್ಯಾಪಕರಾಗಿ, ಉಪಕುಲಪತಿಗಳಾಗಿ ಕಾರ್ಯನಿರ್ವಹಿಸಿದರು. ತಮ್ಮ ಕಲ್ಪನೆಯ ಕೂಸಾದ ಮಾನಸ ಗಂಗೋತ್ರಿ ವಿಶ್ವವಿದ್ಯಾಲಯವನ್ನು ಅಧ್ಯಯನಾಂಗ, ಸಂಶೋಧನಾ0ಗ ಹಾಗೂ ಪ್ರಸಾರಾಂಗ ಎಂಬುದಾಗಿ ವಿಭಾಗಿಸಿ ಅತ್ಯಂತ ಕಡಿಮೆ ಅವಧಿಯಲ್ಲಿ ಪಠ್ಯಪುಸ್ತಕಗಳನ್ನು ಬರೆಸಿ ಕನ್ನಡ ಮಾಧ್ಯಮದ ತರಗತಿಗಳನ್ನು ಪ್ರಾರಂಭಿಸಿದರು.

ಕನ್ನಡದ ಎರಡನೆಯ ರಾಷ್ಟ್ರಕವಿ, ಜ್ಞಾನಪೀಠ ಪ್ರಶಸ್ತಿಯನ್ನು, ಮೊದಲ ಬಾರಿಗೆ ಕನ್ನಡಕ್ಕೆ ತಂದುಕೊಟ್ಟವರು. ಕರ್ನಾಟಕ ಕೊಡಮಾಡುವ ಕರ್ನಾಟಕ ರತ್ನ, ಹಾಗೂ ಪಂಪ ಪ್ರಶಸ್ತಿಯನ್ನು ಮೊದಲ ಬಾರಿಗೆ ಪಡೆದವರು.ಮೈಸೂರಿನ ಮಹಾರಾಜಾ ಕಾಲೇಜಿನಲ್ಲಿ ಓದಿದ ಇವರು ಮೈಸೂರು ವಿಶ್ವವಿದ್ಯಾಲಯದಲ್ಲಿ ಸೇವೆ ಸಲ್ಲಿಸಿ ಉಪಕುಲಪತಿಯಾಗಿ ನಿವೃತ್ತರಾವರು. 1937 ಎಪ್ರಿಲ್ 30 ರಂದು ಹೇಮಾವತಿಯವರನ್ನು ಕೈ ಹಿಡಿದರು..ಪೂರ್ಣಚಂದ್ರ ತೇಜಸ್ವಿ ಮತ್ತು ಕೋಕಿಲೋದಯ ಚೈತ್ರ ಎಂಬ ಪುತ್ರರು, ಇಂದುಕಲಾ ಮತ್ತು ತಾರಿಣಿ ಎಂಬ ಇಬ್ಬರು ಪುತ್ರಿಯರನ್ನೂ ಪಡೆದಿದ್ದರು.ಮೈಸೂರಿನಲ್ಲಿರುವ ಅವರ ಮನೆಯನ್ನು ಉದಯರವಿ ಎಂದು ಕರೆದರು. ಅವರ ಮಗ ಪೂರ್ಣಚಂದ್ರ ತೇಜಸ್ವಿಯವರೂ ಕೂಡ ಬಹುಮುಖಿಯಾಗಿದ್ದು, ಕನ್ನಡ ಸಾಹಿತ್ಯ, ಅರಣ್ಯ ಮತ್ತು ಪ್ರಾಣಿಗಳ ಸಂರಕ್ಷಣೆ, ಛಾಯಾಗ್ರಹಣ, ಕ್ಯಾಲಿಗ್ರಫಿ, ಡಿಜಿಟಲ್ ಇಮೇಜಿಂಗ್, ಸಾಮಾಜಿಕ ಚಳುವಳಿಗಳು ಮತ್ತು ಕೃಷಿಗೆ ಗಣನೀಯ ಕೊಡುಗೆ ನೀಡಿದರು.

ಅವರ ವಿವಾಹವನ್ನು ಕೂಡ ಕುವೆಂಪು ತಮ್ಮದೇ ಕೊಡುಗೆಯಾದ ಸರಳ ವಿವಾಹ ಪದ್ಧತಿಯಾದ *ಮಂತ್ರ ಮಾಂಗಲ್ಯ* ದ ಮೂಲಕ ನೆರವೇರಿಸಿದರು.

ಮಹಾರಾಜ ಕಾಲೇಜಿನಲ್ಲಿ ಕಲಿಯುತ್ತಿರುವಾಗಲೇ ಕುವೆಂಪು ಅವರು ತಮ್ಮ ಮೊಟ್ಟಮೊದಲ ಕವನವನ್ನು ಇಂಗ್ಲೀಷಿನಲ್ಲಿ ರಚಿಸಿದರು. ಆ ರಚನೆಯನ್ನು ತಮ್ಮ ಆಂಗ್ಲ ಪ್ರಾಧ್ಯಾಪಕರಿಗೆ ತೋರಿಸಿದಾಗ ಆ ಪ್ರಾಧ್ಯಾಪಕರು ಮಿಸ್ಟರ್ ಪುಟ್ಟಪ್ಪ ನೀವು ನಿಮ್ಮ ಮಾತೃಭಾಷೆಯಲ್ಲಿಯೇ ಕವನ ರಚಿಸಿ ಎಂದು ತಿಳಿ ಹೇಳಿದರು. ಮುಂದೆ ಕುವೆಂಪು ಅವರು ಸಂಪೂರ್ಣವಾಗಿ ಮಾತೃಭಾಷೆಯಲ್ಲಿಯೇ ಕವನ, ಕಾವ್ಯ, ಗದ್ಯ, ಕಥೆ–ಕಾದಂಬರಿಗಳ ರಚನೆಯನ್ನು ಆರಂಭಿಸಿದರು. ಆ ಆಂಗ್ಲ ಪ್ರಾಧ್ಯಾಪಕರಿಗೆ ಕನ್ನಡ ಸಾಹಿತ್ಯ ಲೋಕ ಯಾವತ್ತೂ ಚಿರಋಣಿ.

ಕುವೆಂಪು ಅವರ ಶ್ರೀ ರಾಮಾಯಣ ದರ್ಶನಂ ಮಹಾಕಾವ್ಯ ರಾಮಾಯಣದ ಮೇರು ಕೃತಿಯಾಗಿ ಜಗತ್ತಿಗೆ ಪರಿಚಿತವಾಗಿದೆ ಅಂತೆಯೇ ಕಾನೂರು ಸುಬ್ಬಮ್ಮ ಹೆಗ್ಗಡತಿ ಮತ್ತು ಮಲೆಗಳಲ್ಲಿ ಮದುಮಗಳು ಕೃತಿಗಳು ಅವರನ್ನು ವಿಶ್ವ ಲೇಖಕರ ಪಟ್ಟಿಗೆ ಸೇರಿಸುತ್ತವೆ.

'ಭಾರತಾಂಬೆಯೇ ಜನಿಸಿ ನಿನ್ನೊಳು ಧನ್ಯನಾದೆನು ದೇವಿಯೇ' ಮತ್ತು 'ಜಯ ಭಾರತ ಜನನಿಯ ತನುಜಾತೆ ಜಯ ಹೇ ಕರ್ನಾಟಕ ಮಾತೆ' ಎಂಬ ಗೀತೆಗಳು ಭಾರತಮಾತೆಯ ಮತ್ತು ಕನ್ನಡ ತಾಯಿಯ ಹಿರಿಮೆ ಗರಿಮೆಗಳನ್ನು ಸಾರುತ್ತ ನಮ್ಮಲ್ಲಿ ದೇಶ ಪ್ರೇಮವನ್ನು ಉಕ್ಕಿಸುತ್ತವೆ. 'ಓ ನನ್ನ ಚೇತನ ಆಗು ನೀ ಅನಿಕೇತನ' ಎಂಬ ಕವನವಂತು ಮನುಷ್ಯನ ಜೀವನದ ನಿಲುವನ್ನು ಮಾರ್ಮಿಕವಾಗಿ ಸೂಚಿಸುತ್ತದೆ

ಬೆರಳ್ಗೆ ಕೊರಳ್, ಪಕ್ಷಿಕಾಶಿ, ಕೊಳಲು, ಬೊಮ್ಮನಹಳ್ಳಿಯ ಕಿಂದರಿ ಜೋಗಿ,ರಕ್ತಾಕ್ಷೀ, ಶೂದ್ರ ತಪಸ್ವಿ, ಮಲೆನಾಡಿನ ಕಥೆಗಳು, ಶಿಲಾ ತಪಸ್ವಿ, ಸ್ವಾಮಿ ವಿವೇಕಾನಂದ, ಚಿತ್ರಾಂಗದ, ಪಾಂಚಜನ್ಯ, ವಿಚಾರ ಕ್ರಾಂತಿಗೆ ಆಹ್ವಾನ, ಕಬ್ಬಿಗನ ಕೈ ಬುಟ್ಟಿ, ಆಯ್ದ ಕವಿತೆಗಳು ಮುಂತಾದ ಕೃತಿಗಳು ಯಮನ ಸೋಲು, ಸ್ಮಶಾನ ಕುರುಕ್ಷೇತ್ರ, ಜಲಗಾರ, ಮಹಾಭಾಗ್ಯ ವಾಲ್ಮೀಕಿಯ ಸೋಲು, ಮೋಡಣ್ಣನ ತಮ್ಮ ಗೋಪಾಲ ಎಂಬ ನಾಟಕಗಳು ಅವರ ಸಾಹಿತ್ಯದ ಉನ್ನತ ಕೃತಿಗಳು. ಆಡು ಮುಟ್ಟದ ಸೊಪ್ಪಿಲ್ಲ ಕುವೆಂಪು ಬರೆಯದ ಸಾಹಿತ್ಯವಿಲ್ಲ ಎಂಬಂತೆ ಕುವೆಂಪು ಅವರು ಸಾಹಿತ್ಯದ ಎಲ್ಲ ಪ್ರಕಾರಗಳಲ್ಲಿ ಬರೆದಿದ್ದಾರೆ. ಓರ್ವ ಬರಹಗಾರ ತನ್ನ ಕೃತಿಗಳನ್ನು ಬರೆಯುತ್ತಾ, ಅಂತಪ್ರಜ್ಞೆಯಲ್ಲಿ ತಂತಾನೆ ಬೆಳೆಯುತ್ತಾ ಹೋದರೆ ಆತನಲ್ಲಿ ಉಂಟಾಗುವ ವಿಶ್ವಮಾನವ ಪ್ರಜ್ಞೆ ಕುವೆಂಪು ಅವರಲ್ಲಿಯೂ ಬೆಳೆಯಿತು. ಸಾಂಸಾರಿಕವಾಗಿ ಲೌಕಿಕವಾಗಿ ಓರ್ವ ಸಾಮಾನ್ಯ ವ್ಯಕ್ತಿ ಎಂಬಂತೆ ತೋರುತ್ತಿದ್ದ ಕುವೆಂಪು ಅವರು ಅಲೌಕಿಕವಾಗಿ ವಿಶ್ವಮಾನವರಾದರು. ಕುವೆಂಪು ಅವರು ಸ್ವಾಮಿ ರಾಮಕೃಷ್ಣ ಪರಮಹಂಸ, ಸ್ವಾಮಿ ವಿವೇಕಾನಂದ ಮತ್ತು ಸ್ವಾಮಿ ಶ್ರದ್ಧಾನಂದರ ಪರಮ ಅನುಯಾಯಿಯಾಗಿದ್ದರು. ತಮ್ಮ ಅತ್ಯುನ್ನತ ಗೌರವದ ಹುದ್ದೆಯ ಹೊರತಾಗಿಯೂ ತಮ್ಮ ಪತ್ನಿ ಮತ್ತು ಮಕ್ಕಳೊಂದಿಗೆ ಅವರ ಸಂಬಂಧ ಸಮಾಜದ ಇನ್ನಿತರ ಸಂಸಾರಿಕ ಜನಗಳಂತೆ ಸಾಮಾನ್ಯವಾಗಿಯೇ ಇತ್ತು. ಅವರೆಂದು ಮಕ್ಕಳನ್ನು ತಮ್ಮ ಅಧಿಕಾರದ ಕಬಂಧ ಬಾಹುಗಳಲ್ಲಿ ಬೆಳೆಸಲಿಲ್ಲ. ಮೈಸೂರಿನ ಮಾನಸ ಗಂಗೋತ್ರಿಯ ಉಪಕುಲಪತಿಯಾಗಿಯೂ ಕೂಡ ಅವರು ಇಡೀ ವಿಶ್ವವಿದ್ಯಾಲಯವನ್ನು 20ನೇ ಶತಮಾನದ ಧ್ಯೇಯೋದ್ದೇಶಗಳಿಗೆ ಪೂರಕವಾಗಿ ಎಲ್ಲಾ ವಿಧದಲ್ಲಿಯೂ ಬೆಳೆಯುವಂತೆ ಅಭಿವೃದ್ಧಿಪಡಿಸಿದರು. ಅದೇ ಮಾನಸ ಗಂಗೋತ್ರಿ ವಿಶ್ವವಿದ್ಯಾಲಯದಲ್ಲಿ ಓದುತ್ತಿದ್ದ ತಮ್ಮ ಪುತ್ರ ಪೂರ್ಣಚಂದ್ರ ತೇಜಸ್ವಿ ಅವರಿಗೆ ಯಾವುದೇ ರೀತಿಯ ಕಟ್ಟುಪಾಡುಗಳನ್ನು ಹಾಕದೆ ಸ್ವತಂತ್ರವಾಗಿ ಬೆಳೆಯಲು ಬಿಟ್ಟರು. ಮೈಸೂರಿನ ಒಂಟಿಕೊಪ್ಪಲಿನಲ್ಲಿರುವ ತಮ್ಮ ನಿವಾಸ 'ಉದಯರವಿ'ಯಲ್ಲಿ ನಿರಾತಂಕವಾಗಿ ಸಾಹಿತ್ಯ ರಚನೆಯಲ್ಲಿ ತೊಡಗಿಕೊಂಡಿದ್ದರು. ಇದನ್ನೇ ಪೂರ್ಣಚಂದ್ರ ತೇಜಸ್ವಿ ಅವರು ಮತ್ತು ಅವರ ಸಹೋದರಿ ತಾರಿಣಿ ಅವರು ' ಅಣ್ಣನ ನೆನಪುಗಳು' ಎಂಬ ತಂದೆಯವರ ಕುರಿತಾದ ಪುಸ್ತಕದಲ್ಲಿ ತಂದೆಯ ಕುರಿತು ಬರೆದಿದ್ದಾರೆ.

1929 ರಲ್ಲಿ ಪ್ರಾಧ್ಯಾಪಕರಾಗಿ ಮೈಸೂರು ವಿಶ್ವವಿದ್ಯಾಲಯವನ್ನು ಸೇರಿದ ಕುವೆಂಪು ಅವರು 1960ರಿಂದ 1965 ರವರೆಗೆ ವಿಶ್ವವಿದ್ಯಾಲಯದ ಉಪಕುಲಪತಿಯಾಗಿ ನಿವೃತ್ತರಾದರು. 1938 ರಲ್ಲಿ ಮೈಸೂರಿನಲ್ಲಿ ನಡೆದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸ್ವಾಗತ ಅಧ್ಯಕ್ಷರಾಗಿ ಕುವೆಂಪು ಅವರು ಕಾರ್ಯನಿರ್ವಹಿಸಿದರು. 1957 ರಲ್ಲಿ ಧಾರವಾಡದಲ್ಲಿ ನಡೆದ 39ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸ್ವಾಗತ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದರು. ಭಾರತ ದೇಶದ ಅತ್ಯುನ್ನತ ಸಾಹಿತ್ಯ ಪ್ರಶಸ್ತಿಯಾದ ಜ್ಞಾನಪೀಠ (1968) ಪ್ರಶಸ್ತಿಯನ್ನು ಮಹಾಕಾವ್ಯ ಶ್ರೀ ರಾಮಾಯಣ ದರ್ಶನಕ್ಕೆ ಕೊಡ ಮಾಡಲಾಯಿತು. ಇದು ಕನ್ನಡದ ಮೊಟ್ಟ ಮೊದಲ ಜ್ಞಾನಪೀಠ ಪ್ರಶಸ್ತಿ. ಕರ್ನಾಟಕ ವಿಶ್ವವಿದ್ಯಾಲಯವು ಗೌರವ ಡಾಕ್ಟರೇಟ್, ರಾಜ್ಯ ಸರಕಾರದ ರಾಷ್ಟ್ರಕವಿ ಪ್ರಶಸ್ತಿ ಮತ್ತು ಬೆಂಗಳೂರು ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಗಳು ಕುವೆಂಪು ಅವರ ಮುಡಿಗೇರಿದ್ದವು. 1988 ರಲ್ಲಿ ನಡೆದ ಪ್ರಪ್ರಥಮ ವಿಶ್ವಕನ್ನಡ ಸಾಹಿತ್ಯ ಸಮ್ಮೇಳನವನ್ನು ಕೂಡ ಅವರು ಉದ್ಘಾಟಿಸಿದ್ದರು.1988 ರಲ್ಲಿ ಪಂಪ ಪ್ರಶಸ್ತಿ 1994 ರಲ್ಲಿ ಕರ್ನಾಟಕ ರತ್ನ ಪ್ರಶಸ್ತಿಗಳು ಕೂಡ ಕುವೆಂಪು ಅವರಿಗೆ ಸಂದವು. 1994ರ ನವೆಂಬರ್ 11ರಂದು ಕುವೆಂಪು ಅವರು ಮರಣ ಹೊಂದಿದರು. ಕನ್ನಡ ಸಾಹಿತ್ಯ ಲೋಕದ ಮೇರು ಶಿಖರದ ಅಧ್ಯಾಯ ತನ್ನ ಅಂತ್ಯವನ್ನು ಕಂಡಿತು. ಕುಪ್ಪಳ್ಳಿಯ ಅವರ ಅತ್ಯಂತ ಪ್ರೀತಿ ಪಾತ್ರವಾದ ಕವಿಶೈಲದಲ್ಲಿ ಅವರ ಅಂತ್ಯ ಸಂಸ್ಕಾರ ನಡೆಯಿತು.ಕುವೆಂಪು ಅವರ ಹುಟ್ಟೂರಿನ ಮನೆಯನ್ನು ಕವಿಮನೆ ಸ್ಮಾರಕ ಭವನವನ್ನಾಗಿ ಕರ್ನಾಟಕ ಸರ್ಕಾರ ಘೋಷಿಸಿ ಅಲ್ಲಿ ಕುವೆಂಪು ಅವರಿಗೆ ಸಂಬಂಧಪಟ್ಟ ಎಲ್ಲ ವಸ್ತುಗಳನ್ನು ಪುಸ್ತಕಗಳನ್ನು ಸಂಗ್ರಹಿಸಿ ಇಡಲಾಗಿದೆ.1995 ರಲ್ಲಿ ನಾಡೋಜ ಪ್ರಶಸ್ತಿಯನ್ನು ಕೂಡ ಅವರಿಗೆ ಮರಣೋತ್ತರವಾಗಿ ನೀಡಲಾಯಿತು. ಶಿವಮೊಗ್ಗದ ಬಳಿ ಇರುವ ವಿಶ್ವವಿದ್ಯಾಲಯಕ್ಕೆ ಕುವೆಂಪು ಅವರ ಹೆಸರನ್ನು ಇಡಲಾಗಿದೆ. ಅಂತೆಯೇ ಮೈಸೂರು ವಿಶ್ವವಿದ್ಯಾನಿಲಯದ ಕನ್ನಡ ಅಧ್ಯಯನ ಸಂಸ್ಥೆಗೆ ಕುವೆಂಪು ಹೆಸರು ಇಡಲಾಗಿದೆ.

ಯಾವುದೇ ವಸ್ತು ವಿಷಯಗಳು ಆಯಾ ಕಾಲಕ್ಕೆ ಮಾತ್ರ ಸೀಮಿತವಾಗಿದ್ದು ಕಾಲಾಂತರದಲ್ಲಿ ಅವುಗಳ ಆಶಯಗಳು ಬದಲಾಗಬಹುದು... ಇಂತಹ ಆಶ್ರಯ ಅನಿಸಿಕೆಗಳನ್ನು ಕುವೆಂಪು ಅವರು ತಮ್ಮ ಶೂದ್ರ ತಪಸ್ವಿ ಮತ್ತು ಜಲಗಾರ ನಾಟಕಗಳಲ್ಲಿ ತೋರ್ಪಡಿಸಿದರು.

ಅಂತೆಯೇ ಕುವೆಂಪು ಅವರನ್ನು ಕುರಿತು ಇನ್ನೋರ್ವ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಕವಿ ಅಂಬಿಕಾತನಯದತ್ತ ಕಾವ್ಯನಾಮದಿಂದ ಜಗದ್ವಿಖ್ಯಾತಿ ಹೊಂದಿದ ದ.ರಾ.ಬೇಂದ್ರೆ ಅವರು 'ಯುಗದ ಕವಿ ಜಗದ ಕವಿ' ಎಂದು ಬಣ್ಣಿಸಿದರು. ದಲಿತ ಮತ್ತು ಹಿಂದುಳಿದವರ ಬಂಡಾಯಕ್ಕೆ ಕುವೆಂಪು ಸ್ಫೂರ್ತಿದಾಯಕ ರಾಗಿದ್ದರು. ಮಂತ್ರ ಮಾಂಗಲ್ಯ ಎಂಬ ಸರಳ ವಿವಾಹ ಪದ್ಧತಿಯನ್ನು ಅವರು ಜನರಿಗೆ ಪರಿಚಯಿಸಿದರು. 19ನೇ ಶತಮಾನದ ಉತ್ತರಾರ್ಧದಲ್ಲಿ ಮಹಾಕಾವ್ಯವನ್ನು ಮತ್ತೆ ಮರಳಿ ಕನ್ನಡ ಸಾಹಿತ್ಯ ಲೋಕಕ್ಕೆ ದೊರಕಿಸಿಕೊಟ್ಟ ಯುಗ ಪ್ರವರ್ತಕರಾಗಿ ಕುವೆಂಪು ಹೊರಹೊಮ್ಮಿದರು.

ಕುವೆಂಪು ಕೇವಲ ಕರ್ನಾಟಕದವರಲ್ಲ, ಭಾರತದ ಮಹಾ ಲೇಖಕ. ಅವರ 'ರಾಮಾಯಣ ದರ್ಶನಂ' ಆಧುನಿಕ ಭಾರತೀಯ ಸಾಹಿತ್ಯದ ಶ್ರೇಷ್ಠ ಕೃತಿ. ಇಲ್ಲಿ ಬರುವ ರಾಮ, ಸೀತೆ ಯೊಂದಿಗೆ ಅಗ್ನಿ ಪ್ರವೇಶ ಮಾಡುತ್ತಾನೆ. ಎಲ್ಲೆಡೆ ಮಹಿಳೆಯ ಮೇಲೆ ದೌರ್ಜನ್ಯ, ಹಿಂಸೆಗಳು ನಡೆಯುತ್ತಿರುವ ಈ ಹೊತ್ತಿನಲ್ಲಿ ಕುವೆಂಪು ಕಟ್ಟಿಕೊಟ್ಟ ಈ ಚಿತ್ರಣ ಪ್ರಸ್ತುತ ಮತ್ತು ಆದರ್ಶ. ಅವರ ಶೂದ್ರ ತಪಸ್ವಿ ನಾಟಕ, ಶೋಷಣೆ ಮತ್ತು ತಾರತಮ್ಯದ ವರ್ಣ ನೀತಿಗೆ ಮುಖಾಮುಖಿಯಾದ ನಾಟಕ. ಸಾರ್ವಕಾಲಿಕ ಕಾವ್ಯ ಮೀಮಾಂಸೆಯ ಅಧ್ವರ್ಯುಗಳಲ್ಲಿ ಕುವೆಂಪು ಒಬ್ಬರು. ತಾವು ನಂಬಿದ ಕಾವ್ಯ ತತ್ವವನ್ನು ತಮ್ಮ 'ರಸೋ ವೈ ಸಃ'ದಲ್ಲಿ ಹೇಳಿದ್ದಾರೆ. ಕನ್ನಡಕ್ಕೆ ಹೊಸ ನುಡಿಗಟ್ಟು ಮತ್ತು ಹೊಸ ಕಲ್ಪನೆಗಳನ್ನು ನೀಡಿದವರು. ಕಲ್ಪನಾಶಕ್ತಿಯೊಂದಿಗೆ, ಬೌದ್ಧಿಕ ಸಾಮರ್ಥ್ಯವನ್ನು ಮೇಳೈಸಿ, ನೈತಿಕ ಮತ್ತು ಸೌಂದರ್ಯ ಮೀಮಾಂಸೆಯನ್ನು ಉನ್ನತ ಸ್ಥಾನಕ್ಕೆ ಒಯ್ದವರು ಕುವೆಂಪು ಎಂಬುದು ಅವರ ಸಮಕಾಲೀನ ಕವಿಗಳ ಅಭಿಪ್ರಾಯ.

ಹುಟ್ಟುವ ಪ್ರತಿ ಮಗುವು ವಿಶ್ವಮಾನವನೇ! ಆ ನಂತರ ಆ ಮಗುವನ್ನು "ಜಾತಿ, ಮತ"ದ ಕಟ್ಟುಪಾಡುಗಳಿಂದ ಬಂಧಿಸಲಾಗುತ್ತದೆ. ಹಾಗಾಗಬಾರದು. ಯಾವುದೇ ವ್ಯಕ್ತಿ ಜಾತಿಯಿಂದ ಮುಖ್ಯನಾಗಬಾರದು, ನೈತಿಕ ವ್ಯಕ್ತಿತ್ವದಿಂದ ಮುಖ್ಯನಾಗಬೇಕು ಎಂಬ ಪರಿಕಲ್ಪನೆ ಕುವೆಂಪು ಅವರದಾಗಿತ್ತು. ಹಾಗಾಗಿ ಕುವೆಂಪು ಅವರ ಜಾತ್ಯಾತೀತ ಮನೋಭಾವದಿಂದ ಮೂಡಿ ಬಂದ ಆಶಯವೇ ವಿಶ್ವಮಾನವ ಸಂದೇಶವಾಗಿದೆ. ಬುದ್ಧ, ಬಸವರ ಹಾಗೆ ಸಮಾಜದಲ್ಲಿ ವ್ಯಕ್ತಿ ಸ್ವತಂತ್ರವಾಗಿ, ವೈಚಾರಿಕ ದೃಷ್ಟಿಕೋನವನ್ನು ಬೆಳೆಸಿಕೊಳ್ಳಬೇಕೆಂದು ಅವರು ಹೇಳುತ್ತಿದ್ದರು.

ಅಂತೆಯೇ ಅವರ ಕವನ 'ಓ ನನ್ನ ಚೇತನ ಆಗು ನೀ ಅನಿಕೇತನ' ದಲ್ಲಿ ಅವರು ನೂರಾರು ಮತದ ಪೊಳ್ಳು ಸಿದ್ಧಾಂತಗಳನ್ನು ತೂರಿ, ಎಲ್ಲಾ ತತ್ವಗಳ ಎಲ್ಲೆಗಳನ್ನು ಮೀರಿ ಮನುಷ್ಯ ಬೆಳೆಯಬೇಕೆಂದು ಆಶಿಸಿದರು. ಯಾವುದೇ ಹಂತದಲ್ಲಿಯೂ ಮನುಷ್ಯನ ಚಿಂತನಾ ಲಹರಿ ನಿಲ್ಲದಿರಲಿ ಕೊನೆಯನ್ನು ಮುಟ್ಟದಿರಲಿ ಸತತವಾಗಿ ಅನ್ವೇಷಣೆಯ ಹಾದಿಯಲ್ಲಿ ಸಾಗಲಿ ಎಂಬುದು ಅವರ ಆಶಯವಾಗಿತ್ತು. ಅನಂತ ಮತ್ತು ಅಗಣಿತ ಹಾದಿಯಲ್ಲಿ ತಾನು ಅನಂತನಾಗಿ ಮನುಷ್ಯ ವಿಶ್ವಮಾನವತೆಯಲ್ಲಿ ಒಂದಾಗಲಿ ವಿಶ್ವ ಕುಟುಂಬಿಯಾಗಲಿ ' ವಸುದೈವ ಕುಟುಂಬಕಂ' ಎಂಬಂತೆ ಬಾಳಿ ಬದುಕಲಿ ಎಂಬ ಉನ್ನತ ಆಶಯವನ್ನು ಅವರು ಹೊಂದಿದ್ದರು. ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎಂಬ ಕುವೆಂಪು ಅವರ ಆಶಯದಲ್ಲಿ ವಿಜ್ಞಾನಿ ರೈತ ಲೇಖಕ ಸೈನಿಕ ಎಲ್ಲರೂ ಒಂದೇ. ತಮ್ಮ ಬರಹದ ಮೂಲಕ ಅಂಬೇಡ್ಕರ್ ಗಾಂಧಿ ಮತ್ತು ಲೋಹಿಯಾ ಅವರನ್ನು ಕನ್ನಡಕ್ಕೆ ಕರೆತಂದವರು ಕುವೆಂಪು. ನೇಗಿಲ ಮೇಲೆ ನಿಂತಿದೆ ಧರ್ಮ ಎಂದು ಉಳುವಾ ಯೋಗಿಯ ನೋಡಲ್ಲಿ ಎಂಬ ರೈತ ಗೀತೆಯಲ್ಲಿ ಹೇಳುತ್ತಾ ಭಾರತದ ಶ್ರಮ ಸಂಸ್ಕೃತಿಯನ್ನು ಬಿಂಬಿಸಿದವರು ಕುವೆಂಪು. ಬಂಗಾಳದಲ್ಲಿ ರವೀಂದ್ರನಾಥ ಟ್ಯಾಗೂರರನ್ನು ಹೊರತುಪಡಿಸಿದರೆ ಒಂದು ಇಡೀ ಶತಮಾನವನ್ನು ತಮ್ಮ ಬರಹದ ಮೂಲಕ ಬದಲಾಯಿಸಿದ ಏಕೈಕ ವ್ಯಕ್ತಿ ಕುವೆಂಪು.

ಅಂತೆಯೇ 2015 ನೇ ಇಸ್ವಿಯಿಂದ ಕರ್ನಾಟಕ ಘನ ಸರ್ಕಾರವು ಅವರ ಹುಟ್ಟಿದ ದಿನ ಡಿಸೆಂಬರ್ 29 ನ್ನು ವಿಶ್ವಮಾನವ ದಿನವನ್ನಾಗಿ ಆಚರಿಸಲಾಗುತ್ತಿದೆ. ಇದು ಕನ್ನಡದ ರಸಋಷಿ, ರಾಷ್ಟ್ರಕವಿ ಕುವೆಂಪು ಅವರಿಗೆ ಸಂದ ಮತ್ತೊಂದು ಗೌರವ.

## ಸರಗಳ್ಳರು ಮೊಬೈಲ್ ಕಳ್ಳರಿಂದ ಎಚ್ಚರಿಕೆಯಿಂದಿರಿ: ಪಿಎಸ್ಐ ಗೀತಾಂಜಲಿ ಸಿಂಧೆ ಸೂಚನೆ

**ಹಂಪಿ ಟೈಮ್ಸ್ ಕೊಟ್ಟೂರು**

ಕೇವಲ ಪೋಲಿಸರಿಂದ ಅಪರಾಧ ತಡೆ ಸಾಧ್ಯವಿಲ್ಲ, ಸಾರ್ವಜನಿಕರ ಸಹಕಾರವು ಇದಕ್ಕೆ ಬಹುಮುಖ್ಯ, ಈ ಹಿನ್ನೆಲೆ ಸರಗಳ್ಳರು ಮತ್ತು ಮೊಬೈಲ್ ಕಳ್ಳರಿಂದ ಬಸ್ ನ ಪ್ರಯಾಣಿಕರು ಮತ್ತು ಒಬ್ಬಂಟಿಯಾಗಿ ಓಡಾಡುವವರು ಸದಾ ಜಾಗೃತರಾಗಿರಬೇಕೆಂದು ಕೊಟ್ಟೂರು ಪಿಎಸ್ಐ ಗೀತಾಂಜಲಿ ಸಿಂಧೆ ಹೇಳಿದರು.

ಅಪರಾಧ ತಡೆ ಮಾಸಾಚರಣೆ ಪ್ರಯುಕ್ತ ಸರ್ಕಾರಿ ಬಸ್ ನಿಲ್ದಾಣದ ಬಳಿ, ಇಂದು,ಸಾರ್ವಜನಿಕರಿಗೆ ಅಪರಾಧ ಸೂಚನೆಯ ಕರ ಪತ್ರ ಹಂಚಿ, ಧ್ವನಿವರ್ಧಕ ಮೂಲಕ ಬಸ್ ನ ಪ್ರಯಾಣಿಕರಿಗೆ ಹಾಗೂ ಸಂತೆ ಮಾರ್ಕೆಟ್ ಗೆ ಬಂದಂತಹ ಜನರಲ್ಲಿ ಅಪರಾಧ ತಡೆ ಮತ್ತು ಕಾನೂನಿನ ಜಾಗೃತಿ ಮೂಡಿಸಿದರು. ಪ್ರಯಾಣಿಕರು ಬಸ್ ನಲ್ಲಿ ಯಾರಾದರು ತಿಂಡಿ,ತಿನಿಸು ಕೊಟ್ಟರೆ ತಿನ್ನಬೇಡಿ ಹಾಗೆ ಬಸ್ ನಲ್ಲಿ




ಸಂಚರಿಸುವಾಗ ಅಕ್ಕಪಕ್ಕದವರ ಬಗ್ಗೆ ಎಚ್ಚರಿಕೆ ಇರಬೇಕು,ಬಸ್ ಹತ್ತುವಾಗ ಇಳಿಯುವಾಗ ಮೊಬೈಲ್ ಕೈಯಲ್ಲಿ ಭದ್ರವಾಗಿಡಿದು ಪ್ರಯಾಣಿಸಬೇಕು ಎಂದು ಹೇಳಿದರು. ಕಳ್ಳರು ನಿಮ್ಮೊಂದಿಗೆ ಪ್ರೀತಿ, ಸಲುಗೆಯಿಂದ ಮಾತನಾಡಿ, ಕೈಗಳಿಗೆ ಕೆಮಿಕಲ್ ಯುಕ್ತ ಪೌಡರ್

### ಅಪರಾಧ ತಡೆಗೆ 112ಗೆ ಕರೆ ಮಾಡಿ

ಲೇಪಿಸಿ, ನಿಮ್ಮನ್ನು ಅರೆ ಪ್ರಜ್ಞೆಗೊಳಿಸಿ ಹಣ,ಬಂಗಾರ ದೋಚುವರು ಹಾಗಾಗಿ ಪ್ರಯಾಣ ಮಾಡುವಾಗ ಮತ್ತು ಸಾರ್ವಜನಿಕರ ಸ್ಥಳಗಳಲ್ಲಿ ಓಡಾಡುವಾಗ ಸದಾ ಎಚ್ಚರಿಕೆಯಿಂದ ಇರಬೇಕು ಎಂದರು.

ಮನೆ ಅಥವಾ ಓಡಾಡುವ ಸ್ಥಳಗಳಲ್ಲಿ ಅಕ್ಕಪಕ್ಕದಲ್ಲಿ ಅಪರಿಚಿತ ವ್ಯಕ್ತಿಗಳು ಅನುಮಾನಾಸ್ಪದವಾಗಿ ಕಂಡು ಬಂದರೆ ತಕ್ಷಣ 112 ಗೆ, ಕರೆ ಮಾಡಿ ಆಗುವಂತಹ ಅಪರಾಧಗಳನ್ನು ತಡೆಯಲು ಮುಂದಾಗಿ ಎಂದರು.

ಪ್ರಯಾಣಿಕರು ಊರುಗಳಿಗೆ ಹೋಗುವ ಅವಸರದಲ್ಲಿ ಎಲ್ಲೆಂದರಲ್ಲಿ ಬೈಕ್ ಬಿಟ್ಟು ಹೋಗದಿರಿ, ಸುರಕ್ಷಿತ ಸ್ಥಳಗಳಲ್ಲಿ ಬೈಕ್ ಬಿಟ್ಟು ಹ್ಯಾಂಡ್ಲ್ ಲಾಕ್ ಮಾಡಿ ಹೋಗಬೇಕು ಎಂದು ಜಾಗೃತಿ ಮೂಡಿಸಿದರು.

## ಕವಿ ಮನಸು

### ಪರರ ಕಾಡದಿರು



ರೆಕ್ಕೆ ಬಡಿದು ಗಗನಕೇರಿ
ಹಕ್ಕಿ ನಲಿಯುತಿದ್ದಿತು
ಸಿಕ್ಕಿದಂಥ ಕಾಳುಕಡಿಯ
ಹೆಕ್ಕಿ ತಿನ್ನುತಿದ್ದಿತು

ನೋಡಿ ಮನುಜ ಸಹಿಸದಾಗಿ
ಕೂಡಿ ಹಾಕಬಯಸಿದ
ಬೇಡಿ ತೊಡಿಸಿ ಹಕ್ಕಿಯನ್ನು
ಗೂಡಲಿರಸತೊಡಗಿದ

ಸ್ವಚ್ಛ ಮನದ ಹಕ್ಕಿಯೀಗ
ಇಚ್ಛೆಯಂತೆ ಹಾರದು
ಹುಚ್ಚು ಮನದ ನರನ ಆಟ
ಮೆಚ್ಚಲಾರ ದೇವನು

ತನ್ನ ಸುಖಕೆ ಪರರ ಕಾಡಿ
ತಿನ್ನಲೇನು ಸುಖವಿದೆ?
ತನ್ನ ಹಾಗೆ ಪ್ರಾಣಿ ಪಕ್ಷಿ
ಮುನ್ನ ಅರಿಯಬೇಕಿದೆ

ಜೀವಿಯಾಗಿ ಬಂದಮೇಲೆ
ಭಾವ ನೂರು ಮನದಲಿ
ನೋವು ನಲಿವು ಸಹಜ ತಾನೆ
ಬೇವು ಬೆಲ್ಲದಂದದಿ


ಪರರ ಸುಖವ ಕಸಿದು ನಿನಗೆ
ದೊರೆವ ಸುಖವು ಏನಿದೆ
ಬೇಡ ಇಂಥ ದುಷ್ಟ ನಡೆಯು
ಕೂಡಿ ಬಾಳು ಲೋಕದೆ॥

– ಪೆರ್ಮುಖ ಸುಬ್ರಹ್ಮಣ್ಯ ಭಟ್

**ಇ–ಪೇಪರ್ ಉಚಿತ**
ಇಂದೇ ಹಂಪಿ ಟೈಮ್ಸ್ ವಾಟ್ಸ್‌ಪ್ ಚಾನಲ್‌ಗೆ ಸೇರಿ, ಇ–ಪೇಪರ್ ಉಚಿತವಾಗಿ ಪಡೆಯಿರಿ

**ಮಕ್ಕಳು ಅರಸರಾಗಬೇಕೆ?**
ಓದಲು ಸಮಯವಿಲ್ಲವೆಂದು ಪತ್ರಿಕೆಯನ್ನು ಕೈ ಬಿಡಬಾರದು, ಕನ್ನಡ ಪತ್ರಿಕೆಯೊಂದು ಕೈಯಲ್ಲಿಡಿದರೆ, ಹಿರಿಯರನ್ನು ಅನುಸರಿಸುವ ಮಕ್ಕಳು ಮೊಬೈಲ್ ಬಿಟ್ಟು ಅಕ್ಷರ ದಾಸರಾಗುತ್ತಾರೆ. ಅಕ್ಷರ ದಾಸರಾದರೆ ಅರಸರು ಆಗಬಲ್ಲರಲ್ಲವೇ ?

## ತುಂಗಭದ್ರಾ ನೀರಿನ ಮಟ್ಟ




| ಗುರುವಾರ : 28-12-2023 | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1589.33 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 669 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 10.482 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| **ಕಳೆದ ವರ್ಷ ಇದೇ ದಿನ** | |
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1625.58 ಅಡಿ |
| ಒಳ ಹರಿವು | 838 ಕ್ಯುಸೆಕ್ |
| ಹೊರ ಹರಿವು | 9082 ಕ್ಯುಸೆಕ್ |
| ಸಾಮರ್ಥ್ಯ | 78.405 ಟಿಎಂಸಿ |

**ಓದುಗರ ಗಮನಕ್ಕೆ**
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರ ರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
– ಜಾಹೀರಾತು ವ್ಯವಸ್ಥಾಪಕರು.

(ವಿಶ್ವಮಾನವ ಸಂದೇಶ ಸಾರಿದ ರಾಷ್ಟ್ರಕವಿ ಕುವೆಂಪು ಅವರ ಜನುಮ ದಿನ ಇಂದು)

# ಕುವೆಂಪು ಕನ್ನಡಿಯಲ್ಲಿ ವರ್ತಮಾನದ ನೋಟ





ಡಾ. ಸಂಗಮೇಶ ಎಸ್. ಗಣಿ
ಹೊಸಪೇಟೆ
9743171324

ಕನ್ನಡದ ತಿಳಿವನ್ನು ಜಗದಗಲ ಮುಗಿಲಗಲ ಹರಡುವ ಮೂಲಕ ಜಗತ್ತಿನ ತಿಳಿವಿನೊಂದಿಗೆ ಅನುಸಂಧಾನಿಸಿದ ವಿರಳ ಕವಿಗಳಲ್ಲಿ ದಾರ್ಶನಿಕ ಕವಿ ಕುವೆಂಪು ಅವರು ಅಗ್ರಗಣ್ಯರು. ಕವಿ, ಲೇಖಕ, ಕಾದಂಬರಿಕಾರ, ನಾಟಕಕಾರ, ಅನುವಾದಕ, ವಿಮರ್ಶಕ, ಸಮಾಜಚಿಂತಕ, ಶಿಕ್ಷಣತಜ್ಞ, ತತ್ವಜ್ಞಾನಿ ಹೀಗೆ ಕುವೆಂಪು ಅವರ ವ್ಯಕ್ತಿತ್ವಕ್ಕೆ ಹಲವು ಮುಖಗಳಿವೆ. ಕುವೆಂಪು ಕನ್ನಡಿ ಇದ್ದಂತೆ. ಕುವೆಂಪುಕನ್ನಡಿಯ ಮೂಲಕ ಬದುಕಿನ ವೈವಿಧ್ಯಮಯವಾದ ಮುಖಗಳನ್ನು ನೋಡಿಕೊಳ್ಳಲು, ಪರಿಚಯಿಸಿಕೊಳ್ಳಲು, ಒಂದು ಕಾಲಘಟ್ಟದ ಸಾಮಾಜಿಕ, ರಾಜಕೀಯ, ಧಾರ್ಮಿಕ, ಸಾಹಿತ್ಯಿಕ, ಸಾಂಸ್ಕೃತಿಕ ಪಲ್ಲಟಗಳನ್ನು ಅರಿಯಲು ಹಾಗೂ ವರ್ತಮಾನದ ಸಂಗತಿಗಳಿಗೆ ಮುಖಾಮುಖಿಯಾಗಲು ಸಾಧ್ಯವಾಗುತ್ತದೆ ಎಂಬುದು ಸ್ಪಷ್ಟ.

ಕನ್ನಡದ ಮೂಲಕ ಜಗತ್ತನ್ನು ನೋಡುವ ಕನ್ನಡಿ ಎಂದರೆ ಕುವೆಂಪು. ಕುವೆಂಪುಕನ್ನಡಿಯಲ್ಲಿ ವರ್ತಮಾನದ ನೋಟವನ್ನು ರೂಪಿಸಿಕೊಳ್ಳುವ ಜರೂರು ಇದೆ. ಈ ಬಗೆಯ ನೋಟವನ್ನು ಕಟ್ಟಿಕೊಳ್ಳುವ ಅವಶ್ಯಕತೆ ಏಕೆ ಇದೆ ? ಎಂಬ ಪ್ರಶೆ ಬಹಳ ಮುಖ್ಯವಾದುದು. ಕುವೆಂಪು ಅವರದು ಬಹುಶ್ರುತ ಪಾಂಡಿತ್ಯ ಪ್ರತಿಭೆ. ಅವರ ಸೃಜನಶೀಲ ಸಾಹಿತ್ಯಿಕ ಕೊಡುಗೆ ಅತ್ಯುಪಯುಕ್ತವಾದುದು. ತನ್ನ ಕಾಲದ ವಿದ್ಯಮಾನಗಳಿಗೆ ಎದುರುಗೊಂಡ ಕುವೆಂಪು ಅವರು ಯಾವ ಕಾಲಕ್ಕೂ ಅನ್ವಯವಾಗುವ ಮೌಲ್ಯಗಳನ್ನು ಸಾಹಿತ್ಯದ ಮೂಲಕ ಕಟ್ಟಿಕೊಟ್ಟಿರುವ ಕಾರಣಕ್ಕೆ ಅನನ್ಯವೆನಿಸುತ್ತಾರೆ ಹಾಗೂ ಅನುಸಂಧಾನಾರ್ಹವೆನಿಸುತ್ತಾರೆ. ಈ ಹಿನ್ನೆಲೆಯಲ್ಲಿಯೇ ಮತ್ತೆಮತ್ತೆ ನೋಡಿಕೊಳ್ಳಬೇಕಾದ, ಅರ್ಥಮಾಡಿಕೊಳ್ಳಬೇಕಾದ ಕನ್ನಡಿ ಕುವೆಂಪು ಎನಿಸುತ್ತದೆ. ಕುವೆಂಪು ಎಂಬ ಕನ್ನಡಿಯನ್ನು ಇಣುಕಿನೋಡುವ ಮುನ್ನ ವರ್ತಮಾನ ಎಂದರೆ ಏನು ಎಂಬುದನ್ನು ಮೊದಲು ನಿರ್ವಚಿಸಿಕೊಳ್ಳುವುದು ಅವಶ್ಯವಿದೆ.

ವರ್ತಮಾನ ಎಂದರೆ ವಾರ್ತೆ, ಸುದ್ದಿ, ಇರುವಿಕೆ, ಈಗಿನ, ಸದ್ಯದ ಕಾಲಕ್ಕೆ ಸಂಬಂಧಿಸಿದುದು ಎಂಬರ್ಥಗಳಿವೆ. ವರ್ತಮಾನ ಎಂಬುದು ಸಧ್ಯದ ಸ್ಥಿತಿಯಾಗಿರುತ್ತದೆ. ಸಮಯ, ಕಾಲವನ್ನು ಆಧರಿಸಿ ನೋಡುವುದಾದರೆ ವರ್ತಮಾನ ಸದಾ ಚಲನಶೀಲವಾಗಿರುವ ಪ್ರಾಕೃತಿಕ ಪ್ರಕ್ರಿಯೆ. ಕಾಲದ ಮೌಲ್ಯಗಳನ್ನು ಆಧರಿಸಿ ಗಮನಿಸುವುದಾದರೆ ಅದು ಎಂದಿಗೂ ಶಾಶ್ವತವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಚರ್ಚಿಸುವುದಾದರೆ ಒಂದು ಕಾಲದ ಸಾಮಾಜಿಕ, ರಾಜಕೀಯ, ಧಾರ್ಮಿಕ, ಆಧ್ಯಾತ್ಮಿಕ, ಸಾಂಸ್ಕೃತಿಕ ಸಮಸ್ಯೆಗಳು ಮತ್ತು ಮೌಲ್ಯಗಳು ಜೀವಂತವಾಗಿರುತ್ತವೆ. ಆಯಾಯ ಕಾಲದ ಸಮಸ್ಯೆ ಮತ್ತು ಮೌಲ್ಯಗಳು ಕವಿ, ಕಲಾವಿದರ ಸೃಜನಪ್ರತಿಭೆಗೆ ವಸ್ತುವಾಗುತ್ತ, ರೂಪಾಂತರ ಹೊಂದುತ್ತಿರುತ್ತವೆ. ಹೀಗಾಗಿ ಅಂದಿನ 'ವರ್ತಮಾನ' ಎಂದೆಂದಿಗೂ ಇರುವ 'ವರ್ತಮಾನ'ವಾಗುವುದು ಗಮನಾರ್ಹ ಸಂಗತಿ. ಕುವೆಂಪು ತಮ್ಮ ಸಾಹಿತ್ಯ ಕೃತಿಗಳಲ್ಲಿ ಆ ಕಾಲದ ಎಲ್ಲ ಸಮಸ್ಯೆ ಮತ್ತು ಸವಾಲುಗಳನ್ನು ತಮ್ಮ ವಿಶಿಷ್ಟ ಪ್ರತಿಭಾಮೂಸೆಯಲ್ಲಿ ಎರಕ ಹೊಯ್ದಿರುವುದನ್ನು ಗುರುತಿಸಬಹುದಾಗಿದೆ. ಹೀಗಾಗಿ ವರ್ತಮಾನವನ್ನು ಕಾಣಲು ಕುವೆಂಪು ಕನ್ನಡಿಯಾಗಿ ಕಾಣಿಸುವುದು ಈ ಅರ್ಥದಲ್ಲಿ.

ಇಂದು ಸಾಮಾಜಿಕವಾಗಿ, ರಾಜಕೀಯವಾಗಿ, ಧಾರ್ಮಿಕವಾಗಿ, ಸಾಹಿತ್ಯಿಕವಾಗಿ, ಸಾಂಸ್ಕೃತಿಕವಾಗಿ ಬಿಕ್ಕಟ್ಟುಗಳನ್ನು ಎದುರಿಸುತ್ತಿರುವ ಕಾಲಘಟ್ಟ ಇದು. ಸಂಕೀರ್ಣ ಸಮಸ್ಯೆಗಳನ್ನು ಎದುರಿಸುತ್ತಿರುವ ಇಂದಿನ ಕಾಲದ ಎಲ್ಲ ವಿಪ್ಲವಗಳಿಗೆ ಕುವೆಂಪು ಅವರ ಕಾವ್ಯದಲ್ಲಿ ಉತ್ತರಗಳಿವೆ. ಪ್ರೀತಿ, ಪ್ರೇಮ, ಪ್ರಣಯ, ದಾಂಪತ್ಯ, ಪ್ರಕೃತಿಪ್ರೇಮ, ಆದರ್ಶ, ಆಧ್ಯಾತ್ಮ, ರಾಷ್ಟ್ರೀಯತೆ, ಧರ್ಮ, ಶಿಕ್ಷಣ ಇತ್ಯಾದಿ ಸಂಗತಿಗಳನ್ನು ಬರೆಹದಲ್ಲಿ ಒಡಮೂಡಿಸಿದ ಕುವೆಂಪು ಅವರ ಒಟ್ಟು ಸಾಹಿತ್ಯದ ಸ್ಥಾಯಿಗುಣ ಸಾಮಾಜಿಕ ಮತ್ತು ವೈಚಾರಿಕ ಪ್ರಜ್ಞೆ. ನವೋದಯ ಕಾಲದ ಬಹುತೇಕ ಕವಿಗಳಿಗಿಂತ ಭಿನ್ನರಾಗಿರುವ ಕುವೆಂಪು ಅವರು ತಮ್ಮ ಕಥೆ, ಕವಿತೆ, ಪ್ರಬಂಧ, ಕಾದಂಬರಿ, ನಾಟಕ, ಮಹಾಕಾವ್ಯ ಇತ್ಯಾದಿ ಪ್ರಕಾರಗಳಲ್ಲಿ ಬದುಕಿನ ಸಮಗ್ರತೆಯನ್ನು ಶೋಧಿಸಿ, ಕಟ್ಟಿಕೊಟ್ಟಿದ್ದಾರೆ. ಶೂದ್ರ ಸಮುದಾಯದಿಂದ ಬಂದ ಕುವೆಂಪು ಅವರು ಶ್ರೇಣೀಕೃತ ಸಮಾಜದಲ್ಲಿನ ಅಸಮಾನತೆಗಳನ್ನು, ಅನ್ಯಾಯಗಳನ್ನು ಹೋಗಲಾಡಿಸಲು ಕಾವ್ಯವನ್ನು ಪ್ರತಿಭಟನೆಯ ಅಸ್ತ್ರವನ್ನಾಗಿ ಉಪಯೋಗಿಸಿಕೊಂಡರು. ದೇವರು ಧರ್ಮ ಜಾತಿಗಳ ಹೆಸರಿನಲ್ಲಿ ನಡೆಯುತ್ತಿದ್ದ ಶೋಷಣೆಯ ವಿರುದ್ಧ ಸಿಡಿದೇಳುವ ಕವಿ ಕುವೆಂಪು ಸಮಾಜವನ್ನು ತಿದ್ದುವ ಮಾನವತಾವಾದಿಯಾಗಿಯೂ ಕಾಣಿಸುತ್ತಾರೆ. ಮನುಷ್ಯ ಮನುಷ್ಯರ ನಡುವೆ ಉಂಟಾದ ಅಂತರವನ್ನು ಕಡಿಮೆ ಮಾಡಿಕೊಳ್ಳುವ ಅಗತ್ಯವನ್ನ ಕುರಿತು "ಎದೆಯೊಲುಮೆ ಕಣ್ಮುಚ್ಚಲು ಜೀವಕೆ ಬೆಳಕಿಲ್ಲ" ಎಂದು ಹೇಳುವ ಮೂಲಕ ಹೃದಯವೈಶ್ಯಾಲತೆಯ ಅಗತ್ಯತೆಯನ್ನು ಅವರು ಪ್ರತಿಪಾದಿಸಿದರು.

ಉತ್ಕಟವಾದ ಕನ್ನಡಪ್ರೇಮವನ್ನು ಪ್ರಕಟಿಸಿದ ಕುವೆಂಪು ಕನ್ನಡಾಂಬೆಯನ್ನು 'ಭಾರತ ಜನನಿಯ ತನುಜಾತೆ' ಎಂದಿದ್ದಾರೆ. ಕನ್ನಡ ನಾಡು ನುಡಿ, ನಾಡವರ ಏಳಿಗೆ ಅವರ ಅಂತರಾಳದ ಅಭಿಪ್ಸೆಯಾಗಿತ್ತು. ಅಖಂಡ ಕರ್ನಾಟಕದ ಪರಿಕಲ್ಪನೆಯನ್ನು ಮಂಡಿಸಿದ ಅವರು ;

'ಬಾರಿಸು ಕನ್ನಡ ಡಿಂಡಿಮವ
ಓ ಕರ್ನಾಟಕ ಹೃದಯ ಶಿವ,
ಸತ್ತಂತಿಹರನು ಬಡಿದೆಚ್ಚರಿಸು
ಕಚ್ಚಾಡುವವರ ಕೂಡಿಸಿ ಒಲಿಸು
ಹೊಟ್ಟೆಯ ಕಿಚ್ಚಿಗೆ ತಣ್ಣೀರು ಸುರಿಸು
ಒಟ್ಟಿಗೆ ಬಾಳುವ ತೆರದಲಿ ಹರಸು" ಎಂದು ಕನ್ನಡಿಗರ ಒಗ್ಗೂಡುವಿಕೆಯ ಅಗತ್ಯವನ್ನು ಮನಗಾಣಿಸಿದ್ದಾರೆ. 'ಕನ್ನಡಕ್ಕಾಗಿ ಕೈಯೆತ್ತು ನಿನ್ನ ಕೈ ಕಲ್ಪವೃಕ್ಷವಾಗುತ್ತದೆ' ಎಂಬುದಾಗಿ ಅಭಯವನ್ನೂ ನೀಡುತ್ತಾರೆ. ಕರ್ನಾಟಕ– ಕನ್ನಡ– ಕನ್ನಡಿಗ ಕುರಿತು ಅವರ ಚಿಂತನೆಗಳು ಮೌಲಿಕವಾಗಿವೆ.

ಜಾತಿ, ಮತ, ಪಂಥ, ಧರ್ಮಗಳು ನಮ್ಮ ಭಾರತೀಯ ಸಮಾಜವನ್ನು ಅಂಧಕಾರದಲ್ಲಿ ಮುಳುಗಿಸುತ್ತಿವೆ. ತರತಮಗಳು ಎಲ್ಲೆಲ್ಲೂ ತಾಂಡವವಾಡುತ್ತಿವೆ. ವರ್ಗ, ವರ್ಣಗಳು ಮನುಷ್ಯ ಮನುಷ್ಯರ ನಡುವೆ ಬಿರುಕು ಮೂಡಿಸುತ್ತಿವೆ. ಈ ಹಿನ್ನೆಲೆಯಲ್ಲಿ ;

"ಗುಡಿ ಚರ್ಚು ಮಸೀದಿಗಳ ಬಿಟ್ಟು ಹೊರಬನ್ನಿ
ಬಡತನವ ಬುಡಮುಟ್ಟ ಕೀಳಬನ್ನಿ
ಮೌಢ್ಯತೆಯ ಮಾರಿಯನು ಹೊರದೂಡಲ್ಕೆ ತನ್ನಿ
ವಿಜ್ಞಾನ ದೀವಿಗೆಯ ಹಿಡಿಯ ಬನ್ನಿ
ಓ ಬನ್ನಿ, ಸೋದರರೆ, ಬೇಗ ಬನ್ನಿ" ಎಂದು ಎಚ್ಚರಿಸುವ ಕುವೆಂಪು ಧರ್ಮಾಂಧತೆ, ಬಡತನ, ಮೌಢ್ಯತೆಯನ್ನು ಹೋಗಲಾಡಿಸುವ ಅಗತ್ಯವನ್ನು ಪ್ರತಿಪಾದಿಸುವುದರ ಜೊತೆಗೆ ವೈಜ್ಞಾನಿಕ ಮನೋಭಾವವನ್ನು ಬೆಳೆಸಿಕೊಳ್ಳುವಂತೆ ಪ್ರಚೋದಿಸಿದರು. ತಾನೇ ಸೃಷ್ಟಿಸಿಕೊಂಡು ಸಂಕುಚಿತ ಮತದ ಕೂಪದೊಳಗೆ ನರಳುವ ಮನುಷ್ಯನನ್ನು ವಿಶ್ವಪಥಲ್ಲಿ ನಡೆಯುವಂತೆ ಪ್ರೇರೇಪಿಸುವ ಕುವೆಂಪು .

"ಸಿಲುಕದಿರಿ ಮತವೆಂಬ ಮೋಹದಜ್ಞಾನಕ್ಕೆ
ಮತಿಯಿಂದ ದುಡಿಯಿರೈ ಲೋಕಹಿತಕೆ
ಆ ಮತದ ಈ ಮತದ ಹಳೆಮತದ ಸಹವಾಸ
ಸಾಕಿನ್ನು ಸೇರಿರೈ ಮನುಜ ಮತಕ್ಕೆ
ಓ ಬನ್ನಿ ಸೋದರರೆ, ವಿಶ್ವಪಥಕೆ" ಎಂದು ಕರೆ ನೀಡುತ್ತಾರೆ. ಪುರೋಹಿತಶಾಹಿಯು ಇನ್ನೂ ನಮ್ಮ ದೇಶದಲ್ಲಿ ಪ್ರಬಲವಾಗಿದೆ, ಜೀವಂತವಾಗಿದೆ. ಹೀಗಾಗಿ,

"ಕಟ್ಟಕಡೆಯಲಿ
ದೇವರ ಗುಡಿಯಲಿ
ಪೂಜಾರಿಯೇ ದಿಟದ ನಿವಾಸಿ
ದೇವರೆ ಪರದೇಶಿ !" ದೇವರ ದರುಶನಕೆ ದಲ್ಲಾಳಿಯ ದಯವೇಕೆ ? ಎಂಬ ಪ್ರಶ್ನೆಯನ್ನು ಮುಂದಿಟ್ಟ ಕುವೆಂಪು,

"ನೂರು ದೇವರನೆಲ್ಲ ನೂಕಾಚೆ ದೂರ
ಭಾರತಾಂಬೆಯೆ ದೇವಿ ನಮಗಿಂದು ಪೂಜಿಸುವ ಭಾರ
ಶತಮಾನಗಳು ಬರಿಯ ಜಡ ಶಿಲೆಯ ಪೂಜಿಸಾಯ್ತು
ಪಾವ್ಗಳಿಗೆ ಪಾಲೆರೆದು ಪೋಷಿಸಾಯ್ತು
ಬಿಸಿಲು ಮಳೆಗಾಳಿ ಬೆಂಕಿಯನೆಲ್ಲ ಬೇಡಿಯಾಯ್ತು
ದಾಸರನು ಪೂಜಿಸಿಯೇ ದಾಸ್ಯವಾಯ್ತು ! ದಾಸ್ಯದ ಸಂಕೋಲೆಯಲ್ಲಿ ಸಿಲುಕಿ ಸಂಕಷ್ಟಕ್ಕಿಡಾಗುವ ಮನುಷ್ಯನ ದೌರ್ಬಲ್ಯವನ್ನು ಅಣಕಿಸುವ ಕುವೆಂಪು ಅವರು ಸಂಪ್ರದಾಯದ ಸಿಕ್ಕುಗಳಿಂದ ಬಿಡಿಸಿಕೊಂಡು ಪರಂಪರೆಯ ಪ್ರಜ್ಞೆಯಿಂದ ಬಾಳನ್ನು ನಡೆಸಬೇಕು ಎಂಬ ವಿವೇಕವನ್ನು ಮಾನವನೆದೆಯಲ್ಲಿ ಬಿತ್ತಿದರು.

ವೈಜ್ಞಾನಿಕ ಮನೋಭಾವ ಮತ್ತು ವೈಚಾರಿಕ ಪ್ರಜ್ಞೆ ಜಾಗೃತವಾಗದ ಹೊರತು ಮಾನವ ಜನಾಂಗಕ್ಕೆ ಮತ್ತು ದೇಶದ ಭವಿಷ್ಯಕ್ಕೆ ಉಳಿಗಾಲವಿಲ್ಲ ಎಂದು ನಂಬಿದ್ದ ಕುವೆಂಪು,

"ಹಳೆಮತದ ಕೊಳೆಯೆಲ್ಲ ಹೊಸಮತಿಯ ಹೊಳೆಯಲ್ಲಿ
ಕೊಚ್ಚಿ ಹೋಗಲಿ, ಬರಲಿ ವಿಜ್ಞಾನ ಬುದ್ಧಿ
ವೇದ ಪ್ರಮಾಣತೆಯ ಮರುಮರೀಚಿಕೆಯಲ್ಲಿ
ನೀರರಸಿ ಕೆಡದಿರಲಿ ಸ್ವಾತಂತ್ರ್ಯಸಿದ್ಧಿ" ಎಂದು ಹೇಳಿದ್ದಾರೆ.

'ಯಾವ ಕಾಲದ ಶಾಸ್ತ್ರವೇನು ಹೇಳಿದರೇನು
ಎದೆಯ ದನಿಗೂ ಮಿಗಿಲು ಶಾಸ್ತ್ರವಿಹುದೇನು ?
ಎಂದೊ ಮನು ಬರೆದಿಟ್ಟುದಿಂದೆಮಗೆ ಕಟ್ಟೇನು
ನಿನ್ನೆದೆಯ ದನಿಯೆ ಋಷಿ ! ಮನು ನಿನಗೆ ನೀನು !" ಎನ್ನುವ ಮೂಲಕ 'ಎದೆಯ ದನಿ ಧರ್ಮನಿಧಿ' ಎಂದು ಪ್ರತಿಪಾದಿಸಿದರು. ಇಡೀ ಮನುಷ್ಯ ಒಂದು ಮತಕ್ಕೆ ಸೇರುವ ಬಹುದೊಡ್ಡ ಉದ್ದೇಶ ಸಾಧನೆಗೆ ಮಾನವರನ್ನು ಅಣಿಗೊಳಿಸುವ ಕುವೆಂಪು ಸಾಮಾಜಿಕ ಪ್ರಜ್ಞೆಯಿಂದಲೇ ಸಾಹಿತ್ಯಕೃಷಿ ಗೈದವರು.

ವಿಶ್ವಮಾನವ ಸಂದೇಶದ ಹಿನ್ನೆಲೆ : ವಿಶ್ವದ ತುಂಬೆಲ್ಲಾ ಇರುವ ಎಲ್ಲ ಮನುಷ್ಯರೂ ಒಂದೇ ಎಂಬ ಸೂತ್ರವೇ ವಿಶ್ವಮಾನವ ಸಂದೇಶ. ಪ್ರಪಂಚದ ತುಂಬ ಎಷ್ಟೊಂದು ಧರ್ಮ, ಜಾತಿ, ಪಂಗಡಗಳಿವೆ. ಅದರಲ್ಲೂ ಭಾರತ ಬಹು ಧರ್ಮ, ಜಾತಿ, ಮತ, ಪಂಗಡಗಳನ್ನು ಒಳಗೊಂಡಿರುವ ದೇಶ. ತಂತಮ್ಮ ಜಾತಿ, ಧರ್ಮಗಳೇ ಶ್ರೇಷ್ಠ ಎಂಬ ಭ್ರಮೆಯಲ್ಲಿ ಮನುಷ್ಯ ಅಲ್ಪ ಮಾನವನಾಗುತ್ತ ನಡೆದ ವಾಸ್ತವವನ್ನು ಅರ್ಥಮಾಡಿಕೊಂಡ ಕುವೆಂಪು ವಿಶ್ವಮಾನವ ಸಂದೇಶವನ್ನು ನೀಡುವ ಮೂಲಕ 'ಮನುಷ್ಯಜಾತಿ ತಾನೊಂದೇ ವಲಂ' ಎಂಬುದನ್ನು ಅರುಹಿದರು. ಎಲ್ಲ ಮತ–ಧರ್ಮಗಳು ಮನುಷ್ಯನನ್ನು ಬೆಸೆಯಲು ಸೋತವು. ಹೀಗಾಗಿ ಕುವೆಂಪು ಅವರ ವಿಶ್ವಮಾನವ ಸಂದೇಶವು ವಿಶ್ವಮಾನ್ಯವಾಯಿತು. ಇದರ ಸಾಕಾರಕ್ಕೆ ಮನುಜ ಮತ, ವಿಶ್ವಪಥ, ಸರ್ವೋದಯ, ಸಮನ್ವಯ, ಪೂರ್ಣದೃಷ್ಟಿ– ಈ ಪಂಚಮಂತ್ರಗಳು ಹಾಗೂ ಮನುಷ್ಯ ಜಾತಿ ತಾನೊಂದೇ ವಲಂ ಎಂಬುದನ್ನು ನಿರುಪಾಧಿಕವಾಗಿ ಸ್ವೀಕರಿಸಬೇಕು, ವರ್ಣಾಶ್ರಮ ವ್ಯವಸ್ಥೆಯ ಮೂಲೋತ್ಪಾಟನೆ ಮಾಡಬೇಕು, ಮತಗಳಲ್ಲಿರುವ ಜಾತಿ ಪದ್ಧತಿಯನ್ನು ಸಂಪೂರ್ಣವಾಗಿ ವಿನಾಶಗೊಳಿಸಬೇಕು, 'ಮತ' ತೊಲಗಿ 'ಅಧ್ಯಾತ್ಮ' ಮಾತ್ರ ವೈಜ್ಞಾನಿಕವಾಗಿ ಮಾನ್ಯತೆ ಪಡೆಯಬೇಕು, ಮತ ಮನುಜಮತವಾಗಬೇಕು, ಪಥ ವಿಶ್ವಪಥವಾಗಬೇಕು, ಮನುಷ್ಯ ವಿಶ್ವಮಾನವನಾಗಬೇಕು, ಯಾರೂ ಯಾವ ಒಂದು ನಿರ್ದಿಷ್ಟ ಮತಕ್ಕೆ ಸೇರಿಕೊಂಡ ಪರಸ್ಪರ ವಿಭಜನೆಯಾಗದೇ ಪ್ರತಿಯೊಬ್ಬನೂ ತಾನು ಕಂಡುಕೊಳ್ಳುವ ತನ್ನ ಮತಕ್ಕೆ ಸೇರಿಕೊಳ್ಳಬೇಕು, ಯಾವ ಒಂದು ಗ್ರಂಥವೂ ಏಕೈಕ ಪರಮ ಪೂಜ್ಯ ಗ್ರಂಥ ಇರಬಾರದು ಮತ್ತು ತನ್ನ ದರ್ಶನವನ್ನು ತಾನೇ ರೂಪಿಸಿಕೊಳ್ಳಬೇಕು ಹೀಗೆ ಸಪ್ತಸೂತ್ರಗಳು ವಿಶ್ವಮನ್ನಣೆ ಪಡೆದವು. ಆತ್ಮಶ್ರೀಗಾಗಿ ನಿರಂಕುಶಮತಿಗಳಾಗಿ ಎಂಬುದನ್ನು ತಿಳಿಸಿದ ಕುವೆಂಪು ಯುವಜನಾಂಗವನ್ನು ಜಾಗೃತಗೊಳಿಸಿ, ವಿಚಾರ ಕ್ರಾಂತಿಗೆ ಕರೆಕೊಟ್ಟರು.

"ವಿಜ್ಞಾನ ಸಂಪನ್ನವಾದ ಪಾಶ್ಚಾತ್ಯ ನಾಗರಿಕತೆ ನಮ್ಮನ್ನು ಇನ್ನೂರು ವರ್ಷಗಳ ಕಾಲ ಆಳಿದರೂ ಅದರ ವಿಜ್ಞಾನ ಸೃಷ್ಟಿಸಿದ ಯಂತ್ರನಾಗರಿಕತೆಯನ್ನು ಅನುಕರಿಸಿದ್ದೇವೆ ಹೊರತು ಅದರ ವೈಜ್ಞಾನಿಕ ದೃಷ್ಟಿ ನಮ್ಮದಾಗಲಿಲ್ಲ; ಮತ್ತು ಆ ವೈಜ್ಞಾನಿಕ ದೃಷ್ಟಿಗೂ ತಾಯಿಬೇರಾದ ವೈಚಾರಿಕತೆಯನ್ನೂ ನಾವು ಮೈಗೂಡಿಸಿಕೊಳ್ಳಲಿಲ್ಲ. ಇನ್ನು ಮುಂದಾದರೂ ನಾವು ವೈಜ್ಞಾನಿಕ ದೃಷ್ಟಿಯ ಮತ್ತು ವೈಚಾರಿಕ ಬುದ್ಧಿಯ ನೆರವಿನಿಂದ ನಮ್ಮ ರಾಜಕೀಯ, ಸಾಮಾಜಿಕ ಮತ್ತು ಮತ ಧಾರ್ಮಿಕ ರಂಗಗಳನ್ನು ಪರಿಶೋಧಿಸದಿದ್ದರೆ ನಮಗೆ ಕೇಡು ತಪ್ಪಿದ್ದಲ್ಲ" (ವಿಚಾರ ಕ್ರಾಂತಿಗೆ ಆಹ್ವಾನ : ಪು–44) ಕುವೆಂಪು ಅವರ ಈ ಮಾತು ದೇಶದ ಭವಿಷ್ಯಸೂಚಕವಾಗಿದ್ದು, ಪ್ರಸ್ತುತವಾಗಿದೆ.

ಅರಾಜಕತೆ, ಕೋಮುದ್ವೇಷ, ಭಯೋತ್ಪಾದನೆ, ಭ್ರಷ್ಟಾಚಾರ, ಅನಕ್ಷರತೆ, ಅಜ್ಞಾನ, ಮೌಢ್ಯ, ಬಡತನ, ವರ್ಗ–ವರ್ಣ ಸಂಘರ್ಷ ಮುಂತಾದ ಸಮಸ್ಯೆಗಳಿಂದ ನಮ್ಮ ದೇಶ ಬಳಲುತ್ತಿದೆ. ಹುಸಿ ರಾಷ್ಟ್ರೀಯತೆ, ಏಕ ಧರ್ಮ, ಭಾಷೆ, ಸಂಸ್ಕೃತಿಗಳ ಹೇರಿಕೆ, ಬಹುತ್ವದ ನಾಶ, ಜಾಗತೀಕರಣದ ವ್ಯತಿರಿಕ್ತ ಪರಿಣಾಮ ಇತ್ಯಾದಿ ಜ್ವಲಂತ ಸಮಸ್ಯೆಗಳನ್ನು ಎದುರಿಸುತ್ತಿರುವ ಈ ಹೊತ್ತಿನಲ್ಲಿ ಸ್ಥಳೀಯತೆ–ಪ್ರಾದೇಶಿಕತೆ–ರಾಷ್ಟ್ರೀಯತೆ–ವಿಶ್ವಾತ್ಮಕತೆ, ಸಂಪ್ರದಾಯ–ಪರಂಪರೆ, ರಾಜಕಾರಣ–ಧರ್ಮ, ವಿಜ್ಞಾನ–ಅಧ್ಯಾತ್ಮ, ಶಿಕ್ಷಣ, ಸಾಹಿತ್ಯಿಕ ಸಾಂಸ್ಕೃತಿಕ ಸಂಗತಿಗಳ ಕುರಿತು ಕುವೆಂಪು ಅವರ ಚಿಂತನೆಗಳು ಮೌಲಿಕವೂ ಗಣನೀಯವೂ ಹಾಗೂ ಮನನೀಯವೂ ಆಗಿವೆ. ಇಂದು ಮಾನವಕುಲ ಎದುರಿಸುವ ಅನೇಕ ಬಿಕ್ಕಟ್ಟುಗಳಿಗೆ ಕುವೆಂಪು ಅವರು ನೀಡಿರುವ ವಿಶ್ವಮಾನವ ಸಂದೇಶವೇ ಪರಿಹಾರವಾಗಿದೆ. ಈ ಹಿನ್ನೆಲೆಯಲ್ಲಿ ಕುವೆಂಪುದರ್ಪಣದಲ್ಲಿ ನಮ್ಮನ್ನು ನಾವು ಮತ್ತೆಮತ್ತೆ ನೋಡಿಕೊಳ್ಳುತ್ತ ಬಾಳನ್ನು ಒಪ್ಪ ಓರಣಗೊಳಿಸುತ್ತ ಮುನ್ನಡೆಯುವ ಅಗತ್ಯವಿದೆ. ಮಾನವ ಕುಲದ ಸಮಗ್ರ ಏಳಿಗೆಗೆ, ವಿಶ್ವದ ಉನ್ನತಿಗೆ ತಮ್ಮದೆಯಾದ ಚಿಂತನೆಗಳನ್ನು ನೀಡುವ ಮೂಲಕ ಕುವೆಂಪು ಅವರು 'ಜಗದ ಕವಿ, ಯುಗದ ಕವಿ'ಯಾಗಿ ಚಿರಸ್ಥಾಯಿಯಾಗಿದ್ದಾರೆ.

---

**IN THE COURT OF THE HON'BLE CIVIL JUDGE AND J.M.F.C. AT KUDLIGI**
**Crl. Misc. No. 1356/2023**

Between: 1. G.Hiriyamma W/o late Rajappa, aged about 56 years, 2. G. Doddappa S/o late G.Marappa, aged about 40 years, 3.Marappa S/o late G.Marappa, aged about 38 years. 4. Halappa S/o late G.Marappa, aged about 34 years.
All are Hindus, agriculturists, permanent resident of Suladahalli village, in Kudligi Taluk, Vijayanagara District, …. Petitioners
And
The Tahasildar Kudligi … Respondent

**SUMMONS TO INTERESTED PERSON U/O V RULE 20(A) R/W SEC 151 OF CPC FILED ON BEHALF OF THE PETITIONERS.**

Whereas the above petitioners have instituted above petition to get the death certificate of petitioner No-1's Aunty Petitioner No-2 to 4s grandmother by Name late Gollara Boramma W/o late Gollara Sanna Doddappa was died on 10.01.2009 at Suladahalli village in Kudligi Taluk, and Vijayanagara District On the file of the civil Judge & JMFC at Kudligi. The Tahasildar, Kudligi is the respondent. The interested person are hereby summoned to appear in this court in person or by pleader duly instructed and able to answer all material question relating to the above petition on 30.12.2023 at 11 A.M. and interested persons are directed to produce all the documents upon which you intended to rely in support of your defense.
Take notice that in default of your appearance on that day, above mentioned case will be heard and determined ex parte. Given under my hand and seal of this Hon'ble Court on 5.12.2023

By Order of the court
Chief Ministerial officer
Civil Judge and J.M.F.C Kudligi
Sri. Narappa, Advocate, Kudligi

---

**IN THE COURT OF THE HON'BLE CIVIL JUDGE AND J.M.F.C. AT KUDLIGI**
**Crl. Misc. No. 1355/2023**

Between: 1.Marappa S/o late Kanadagala Marappa, aged about 53 years, 2.Smt. Mugamma D/o late Kanadagala Marappa, aged about 52 years, 3.Smt. Maramma D/o late Kanadagala Marappa, aged about 50 years. 4.Smt. Jayamma D/o late Kanadagala Marappa, aged about 48 years. 5.Manjappa S/o late Kanadagala Marappa, aged about 46 years. 6.Sanna Doddappa S/o late Kanadagala Marappa, aged about 44 years.
All are Hindus, agriculturists, permanent resident of Suladahalli village, in Kudligi Taluk, Vijayanagara District, …. Petitioners
And
The Tahasildar Kudligi … Respondent

**SUMMONS TO INTERESTED PERSON U/O V RULE 20(A) R/W SEC 151 OF CPC FILED ON BEHALF OF THE PETITIONERS.**

Whereas the above petitioners have instituted above petition to get the death certificate of decease petitioners father by Name late Kanadagala Marappa S/o late Marajja was died on 26/09/1996 at Suladahalli village in Kudligi Taluk, and Vijayanagara District On the file of the civil Judge & JMFC at Kudligi. The Tahasildar, Kudligi is the respondent. The interested person are hereby summoned to appear in this court in person or by pleader duly instructed and able to answer all material question relating to the above petition on 30.12.2023 at 11 A.M. and interested persons are directed to produce all the documents upon which you intended to rely in support of your defense.
Take notice that in default of your appearance on that day, above mentioned case will be heard and determined ex parte. Given under my hand and seal of this Hon'ble Court on 5.12.2023

By Order of the court
Chief Ministerial officer
Civil Judge and J.M.F.C Kudligi
Sri. Narappa, Advocate, Kudligi

---

**IN THE COURT OF THE HON'BLE CIVIL JUDGE AND J.M.F.C. AT KUDLIGI**
**Crl. Misc. No. 1361/2023**

Between: 1.G.Hiriyamma W/o late Rajappa, aged about 56 years, 2.G.Doddappa S/o late G.Marappa, aged about 40 years, 3. Marappa S/o late G.Marappa, aged about 38 years. 4.Halappa S/o late G.Marappa, aged about 34 years.
All are Hindus, agriculturists, permanent resident of Suladahalli village, in Kudligi Taluk, Vijayanagara District, …. Petitioners
And
The Tahasildar Kudligi … Respondent

**SUMMONS TO INTERESTED PERSON U/O V RULE 20(A) R/W SEC 151 OF CPC FILED ON BEHALF OF THE PETITIONERS.**

Whereas the above petitioners have instituted above petition to get the death certificate of petitioner No-1's uncle, Petitioner No-2 to 4s grandfather by Name late Gollara Doddappa S/o late Gollara Dodda @ Ramappa was died on 11.08.1990 at Suladahalli village in Kudligi Taluk, and Vijayanagara District On the file of the civil Judge & JMFC at Kudligi. The Tahasildar, Kudligi is the respondent. The interested person are hereby summoned to appear in this court in person or by pleader duly instructed and able to answer all material question relating to the above petition on 30.12.2023 at 11 A.M. and interested persons are directed to produce all the documents upon which you intended to rely in support of your defense. Take notice that in default of your appearance on that day, above mentioned case will be heard and determined ex parte. Given under my hand and seal of this Hon'ble Court on 5.12.2023

By Order of the court
Chief Ministerial officer
Civil Judge and J.M.F.C Kudligi
Sri. Narappa, Advocate, Kudligi

---

**IN THE COURT OF THE HON'BLE CIVIL JUDGE AND J.M.F.C. AT KUDLIGI**
**Crl. Misc. No. 1354/2023**

Between: 1.G.Hiriyamma W/o late Rajappa, aged about 56 years, 2.G.Doddappa S/o late G.Marappa, aged about 40 years, 3. Marappa S/o late G.Marappa, aged about 38 years. 4.Halappa S/o late G.Marappa, aged about 34 years.
All are Hindus, agriculturists, permanent resident of Suladahalli village, in Kudligi Taluk, Vijayanagara District, …. Petitioners
And
The Tahasildar Kudligi … Respondent

**SUMMONS TO INTERESTED PERSON U/O V RULE 20(A) R/W SEC 151 OF CPC FILED ON BEHALF OF THE PETITIONERS.**

Whereas the above petitioners have instituted above petition to get the death certificate of petitioner No-1's uncle, Petitioner No-2 to 4s father by Name late Gollara Marappa S/o late Gollara Doddappa was died on 12.07.2021 at Suladahalli village in Kudligi Taluk, and Vijayanagara District On the file of the civil Judge & JMFC at Kudligi. The Tahasildar, Kudligi is the respondent. The interested person are hereby summoned to appear in this court in person or by pleader duly instructed and able to answer all material question relating to the above petition on 30.12.2023 at 11 A.M. and interested persons are directed to produce all the documents upon which you intended to rely in support of your defense.
Take notice that in default of your appearance on that day, above mentioned case will be heard and determined ex parte. Given under my hand and seal of this Hon'ble Court on 5.12.2023

By Order of the court
Chief Ministerial officer
Civil Judge and J.M.F.C Kudligi
Sri. Narappa, Advocate, Kudligi

---

**IN THE COURT OF THE HON'BLE CIVIL JUDGE AND J.M.F.C. AT KUDLIGI**
**Crl. Misc. No. 1358/2023**

Between: 1. G.Marakka D/o late G.H.Marappa, late Rajappa, aged about 70 years, 2.Jayamma W/o Doddasiddappa, aged about 66 years, 3.Kuri Marappa S/o late G.H. Marappa, aged about 65 years. 4.Sanna Doddappa S/o late G.H.Marappa, aged about 60 years. 5. Doddamma W/o late Ajjappa, aged about 58 years,
All are Hindus, agriculturists, permanent resident of Suladahalli village, in Kudligi Taluk, Vijayanagara District, …. Petitioners
And
1] The Tahasildar Kudligi, 2] G.Doddappa S/o G.H.Marappa, Suladahalli Village … Respondentst

**SUMMONS TO INTERESTED PERSON U/O V RULE 20(A) R/W SEC 151 OF CPC FILED ON BEHALF OF THE PETITIONERS.**

Whereas the above petitioners have instituted above petition to get the death certificate of petitioners and respondent No-2's father by Name late Gollara Hotte Marappa S/o late Gollara Hotte Bharamappa was died on 17/02/1984 at Suladahalli village in Kudligi Taluk, and Vijayanagara District On the file of the civil Judge & JMFC at Kudligi. The Tahasildar, Kudligi is the respondent. The interested person are hereby summoned to appear in this court in person or by pleader duly instructed and able to answer all material question relating to the above petition on 30.12.2023 at 11 A.M. and interested persons are directed to produce all the documents upon which you intended to rely in support of your defense.
Take notice that in default of your appearance on that day, above mentioned case will be heard and determined ex parte. Given under my hand and seal of this Hon'ble Court on 5.12.2023

By Order of the court
Chief Ministerial officer
Civil Judge and J.M.F.C Kudligi
Sri. Narappa, Advocate, Kudligi

---

**IN THE COURT OF THE HON'BLE CIVIL JUDGE AND J.M.F.C. AT KUDLIGI**
**Crl. Misc. No. 1357/2023**

Between: 1. G.Hiriyamma W/o late Rajappa, aged about 56 years,
2. G.Doddappa S/o late G.Marappa, aged about 40 years, 3.Marappa S/o late G.Marappa, aged about 38 years. 4. Halappa S/o late G.Marappa, aged about 34 years.
All are Hindus, agriculturists, permanent resident of Suladahalli village, in Kudligi Taluk, Vijayanagara District, …. Petitioners
And
The Tahasildar Kudligi … Respondent

**SUMMONS TO INTERESTED PERSON U/O V RULE 20(A) R/W SEC 151 OF CPC FILED ON BEHALF OF THE PETITIONERS.**

Whereas the above petitioners have instituted above petition to get the death certificate of petitioner No-1's Aunty, Petitioner No-2 to 4s grandmother by Name late Gollara Doddamma W/o late Gollara Doddappa was died on 24.10.2006 at Suladahalli village in Kudligi Taluk, and Vijayanagara District On the file of the civil Judge & JMFC at Kudligi. The Tahasildar, Kudligi is the respondent. The interested person are hereby summoned to appear in this court in person or by pleader duly instructed and able to answer all material question relating to the above petition on 30.12.2023 at 11 A.M. and interested persons are directed to produce all the documents upon which you intended to rely in support of your defense. Take notice that in default of your appearance on that day, above mentioned case will be heard and determined ex parte. Given under my hand and seal of this Hon'ble Court on 5.12.2023

By Order of the court
Chief Ministerial officer
Civil Judge and J.M.F.C Kudligi
Sri. Narappa, Advocate, Kudligi




# ಪ್ರಬಂಧ, ಭಿತ್ತಿ ಚಿತ್ರ ರಚನೆ ಸ್ಪರ್ಧೆ ಯಶಸ್ವಿ

## ರಾಷ್ಟ್ರೀಯ ಮತದಾರರ ದಿನಾಚರಣೆ ಪ್ರಯುಕ್ತ ಚುನಾವಣಾ ಆಯೋಗದಿಂದ ವಿದ್ಯಾರ್ಥಿಗಳಿಗೆ ಸ್ಪರ್ಧೆ



**ಹಂಪಿ ಟೈಮ್ಸ್ ಹೊಸಪೇಟೆ**
ರಾಷ್ಟ್ರೀಯ ಮತದಾರರ ದಿನಾಚರಣೆ ಪ್ರಯುಕ್ತ ಚುನಾವಣಾ ಆಯೋಗದ ನಿರ್ದೇಶದನ್ವಯ ಗುರುವಾರ ಜಿಲ್ಲಾ ಪಂಚಾಯತ್ ಕಚೇರಿ ವಿಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿ ಪ್ರೌಢಶಾಲೆ, ಪದವಿ ಪೂರ್ವ, ಪದವಿ ಸ್ನಾತಕೋತ್ತರ ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ಪ್ರಬಂಧ ಮತ್ತು ಭಿತ್ತಿಚಿತ್ರ ರಚನೆ ಸ್ಪರ್ಧೆ ಯಶಸ್ವಿಯಾಗಿ ನಡೆಯಿತು.
ಸ್ಪರ್ಧೆಗೆ ರಾಜ್ಯ ಚುನಾವಣಾ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಿ, ವಿದ್ಯಾರ್ಥಿಗಳಿಗೆ ಶುಭಕೋರಿದರು.
ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸದಾಶಿವ ಪ್ರಭು ಬಿ., ಜಿ.ಪಂ ಉಪಕಾರ್ಯದರ್ಶಿ ಭೀಮಪ್ಪ ಲಾಳಿ, ಡಿ.ಡಿ.ಪಿ.ಯು. ಯುನಾಗರಾಜ್ ಹವಲ್ದಾರ್, ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗೂ ರಾಜ್ಯ ಸ್ವೀಪ್ ತರಬೇತಿದಾರಕೃಷ್ಣನಾಯ್ಕ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.
**ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳು:** ಕನ್ನಡ ಪ್ರಬಂಧದಲ್ಲಿ ಸಂಜನಾಕುಂಟುರು, ತುಳಸಿಹಾಗೂ ಡಿ.ವೀರಬಸಮ್ಮ, ಆಂಗ್ಲಾ ಪ್ರಬಂಧದಲ್ಲಿ ಚಿನ್ಮಯಿ ಕೆ., ಸುಪ್ರಿಯಾಡಿ.ಕೆ ಹಾಗೂ ದೀಕ್ಷಿತ್, ಭಿತ್ತಿಚಿತ್ರ ರಚನೆಯಲ್ಲಿ ಅಂಜುಮ್, ವಿಜಯಲಕ್ಷ್ಮಿ ಬಸವರಾಜ ಅಂಗಡಿ ಮತ್ತು ಪಲ್ಲವಿ ಕೆ. ಈ ಎಲ್ಲಾ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಆಯ್ಕೆಯಾಗಿದ್ದಾರೆ.

# ಸ್ವಾಸ್ಥ್ಯ ಸಮಾಜ ನಿರ್ಮಿಸಲು ಮುಂದಾಗಿ

## ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಸಚಿವ ರುದ್ರೇಶ ಎಸ್.ಎನ್ ಹೇಳಿಕೆ

**ಹಂಪಿ ಟೈಮ್ಸ್ ಬಳ್ಳಾರಿ**
ದೇಶದ ಯುವಕರು ಸಮಾಜದ ಸ್ವಾಸ್ಥ್ಯ ಕಾಪಾಡಲು ಸ್ವಯಂ ಪ್ರೇರಿತರಾಗಿ ಮುಂದಾಗಬೇಕು ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಸಚಿವರಾದ ರುದ್ರೇಶ ಎಸ್.ಎನ್ ಅವರು ಹೇಳಿದರು.

ರಾಜ್ಯ ಏಡ್ಸ್ ನಿಯಂತ್ರಣ ಸಂಸ್ಥೆ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವ ಮತ್ತು ನಿಯಂತ್ರಣ ಘಟಕ ಹಾಗೂ ವಿಜಯನಗರ ಶ್ರೀಕೃಷ್ಣ ದೇವರಾಯ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನಾ ಕೋಶ ಇವರ ಸಂಯುಕ್ತಾಶ್ರಯದಲ್ಲಿ ನಗರದ ಹೊರವಲಯ ದಲ್ಲಿನ ವಿಜಯನಗರ ಶ್ರೀಕೃಷ್ಣ ದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ "ಹೆಚ್.ಐ.ವಿ/ಏಡ್ಸ್, ಟಿ.ಬಿ., ಆರ್‌ಆರ್‌ಸಿ ಗುರಿ ಉದ್ದೇಶ ಮತ್ತು ರಕ್ತದಾನ" ಕುರಿತಾದ ವಿಶ್ವವಿದ್ಯಾಲಯ ವ್ಯಾಪ್ತಿಗೊಳಪಡುವ ಎಲ್ಲಾ ಪದವಿ ಮಹಾವಿದ್ಯಾಲಯಗಳ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯ ಕ್ರಮಾಧಿಕಾರಿಗಳಿಗೆ ಗುರುವಾರ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಸದೃಢ ಸಮಾಜ ನಿರ್ಮಿಸುವಲ್ಲಿ ಯುವಕರ ಪಾತ್ರ ಬಹುಮುಖ್ಯವಾಗಿದೆ. ಯುವಕರು ದುಶ್ಚಟಗಳಿಗೆ ಒಳಗಾಗದೆ ದೇಹ ಮತ್ತು ಮನಸ್ಸನ್ನು ಹತೋಟಿಯಲ್ಲಿಟ್ಟುಕೊಳ್ಳಬೇಕು ಎಂದು ಹೇಳಿದರು.



ಪ್ರಾಧ್ಯಾಪಕರು ಕಾರ್ಯಾಗಾರದಲ್ಲಿ ಪಡೆದಂತಹ ಮಾಹಿತಿಯನ್ನು ಸಮಾಜದ ಒಳಿತಿಗಾಗಿ ಬಳಸಬೇಕು ಎಂದು ಸಲಹೆ ನೀಡಿದರು.

ವಿಶ್ವವಿದ್ಯಾಲಯದ ಪ್ರಭಾರ ಕುಲಪತಿ ಪ್ರೊ. ಡಾ.ಅನಂತ ಎಲ್.ಝುಂಡೆಕರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಆರೋಗ್ಯ ಇಲಾಖೆಯು ಹೆಚ್‌ಐವಿ ಏಡ್ಸ್ ನಿಯಂತ್ರಣ ಜಾಗೃತಿ ಮೂಡಿಸಲು ಶ್ರಮಿಸುತ್ತಿದೆ. ಏಡ್ಸ್ ಕುರಿತಾಗಿ ಜನರಲ್ಲಿರುವ ತಪ್ಪು ಮಾಹಿತಿಯನ್ನು ಹೋಗಲಾಡಿಸಲು ವಿವಿಧ ಕಾರ್ಯಕ್ರಮಗಳ ಮೂಲಕ ಪ್ರಯತ್ನಿಸುತ್ತಿದ್ದು, ಇಂತಹ ಮಾರಕ ರೋಗಗಳ ಕುರಿತು ಅಧ್ಯಾಪಕರುಗಳು ಯುವಕರಿಗೆ ಮಾರ್ಗದರ್ಶನ ನೀಡಬೇಕು ಎಂದು ಹೇಳಿದರು.

ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕದ ಜಿಲ್ಲಾ ಮೇಲ್ವಿಚಾರಕ ಗಿರೀಶ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಮಾಜಿ ಪ್ರಭಾರ ಕುಲಪತಿಗಳಾದ ಪ್ರೊ. ಸಾಹೇಬ್ ಅಲಿ ಹೆಚ್.ನಿರಗುಡಿ, ರಾಷ್ಟ್ರೀಯ ಸೇವಾಯೋಜನೆ ಸಂಯೋಜನಾಧಿಕಾರಿ ಡಾ.ಕುಮಾರ ಸೇರಿದಂತೆ ವಿವಿಧ ವಿಭಾಗಗಳ ಡೀನರು, ಮುಖ್ಯಸ್ಥರು ಹಾಗೂ ವವಿಶ್ವವಿದ್ಯಾಲಯ ವ್ಯಾಪ್ತಿಗೊಳಪಡುವ ಎಲ್ಲಾ ಪದವಿ ಮಹಾವಿದ್ಯಾಲಯಗಳ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯ ಕ್ರಮಾಧಿಕಾರಿಗಳು, ಮತ್ತಿತರರು ಉಪಸ್ಥಿತರಿದ್ದರು.

# ಡಿ.30ರವರೆಗೆ ಟಿ.ಬಿ.ಡ್ಯಾಂನಿಂದ ನದಿಗೆ ನೀರು

ಹಂಪಿ ಟೈಮ್ಸ್ ಕೊಪ್ಪಳ
ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ತಿಮ್ಮಾಪುರ ಏತ ನೀರಾವರಿ ಯೋಜನೆ ಲೋಕಾರ್ಪಣೆ ಮಾಡಲಿರುವ ಪ್ರಯುಕ್ತ ಡಿಸೆಂಬರ್ 27 ರಿಂದ ಡಿಸೆಂಬರ್ 30ರವರೆಗೆ 0.20 ಟಿ.ಎಂ.ಸಿಯಷ್ಟು ನೀರನ್ನು ನದಿಗೆ ಬಿಡಲಾಗುವುದು, ಪ್ರಯುಕ್ತ ತುಂಗಭದ್ರಾ ಜಲಾಶಯದ ಕೆಳಭಾಗದ ಗ್ರಾಮಸ್ಥರು ನದಿ ಹತ್ತಿರ ಓಡಾಡಬಾರದು. ಜಾನುವಾರುಗಳನ್ನು ಸಹ ನದಿಯ ಹತ್ತಿರ ಓಡಾಡದಂತೆ ಮುಂಜಾಗ್ರತೆ



ವಹಿಸಲು ಕೋರಲಾಗಿದೆ.
ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರು ಆಗಿರುವ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರ ನಿರ್ದೇಶನದಂತೆ ನದಿಗೆ ನೀರು ಬಿಡಲಾಗುತ್ತಿದೆ ಎಂದು ಅಧೀಕ್ಷಕ ಅಭಿಯಂತರರು, ಕನೀನಿನಿ, ತುಂಗಭದ್ರಾ ಯೋಜನಾ ವೃತ್ತ, ಮುನಿರಾಬಾದ್ ಹಾಗೂ ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಎಲ್ ಬಸವರಾಜ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ಕೌಶಲ ಸ್ಪರ್ಧೆ: ಅರ್ಜಿ ಸಲ್ಲಿಕೆಗೆ ಜ. 7 ಕೊನೆದಿನ

ಹಂಪಿ ಟೈಮ್ಸ್ ಕೊಪ್ಪಳ
ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮವು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ವಿಶ್ವ ಕೌಶಲ್ಯ ಸ್ಪರ್ಧೆಯನ್ನು ಆಯೋಜಿಸಲಾಗುತ್ತಿದ್ದು, ಈ ಸ್ಪರ್ಧೆಗೆ ಅರ್ಹ ಅಭ್ಯರ್ಥಿಗಳಿಂದ ವಿವಿಧ ಹಂತಗಳಲ್ಲಿ ಆಯ್ಕೆ ಮಾಡುವ ಪ್ರಕ್ರಿಯೆ ಪ್ರಾರಂಬಿಸಲಾಗಿದೆ. ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ಜಿಲ್ಲೆ, ವಿಭಾಗೀಯ, ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಹೀಗೆ ಪ್ರತಿ ಹಂತದಲ್ಲೂ ವಿಜೇತರಾಗಿ ರಾಷ್ಟ್ರ ಮಟ್ಟದಲ್ಲಿ ವಿಜೇತರಾದ ಅಭ್ಯರ್ಥಿಗಳಿಗೆ ಕೇಂದ್ರ ಸರ್ಕಾರದ ವತಿಯಿಂದ 2024ರಲ್ಲಿ ಫ್ರಾನ್ಸಿನ ಲಿಯೋನ್‌ನಲ್ಲಿ ನಡೆಯುವ "ವಿಶ್ವ ಕೌಶಲ್ಯ ಸ್ಪರ್ಧೆ"ಯಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಈ ಸ್ಪರ್ಧೆಯಲ್ಲಿ ಭಾಗವಹಿಸಲು ಆಸಕ್ತ ಅಭ್ಯರ್ಥಿಗಳು ಜನವರಿ 07 ರೊಳಗಾಗಿ ಶರಣಪ್ಪ ತೊಂಡಿಹಾಳ, ಜಿಲ್ಲಾ ಸಂಯೋಜಕರು, ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿ, ಕೊಪ್ಪಳ ಇವರನ್ನು ಮೊ.ನಂ-9743839859 ಸಂಪರ್ಕಿಸಬಹುದಾಗಿದೆ. ಅಥವಾ ಇಲಾಖೆಯ ಜಾಲತಾಣವಾದ www.skillindiadigital.gov.inರಲ್ಲಿ ಸ್ಪರ್ಧೆಗೆ ಸಂಬಂಧಿಸಿದ ಸಂಪೂರ್ಣ ವಿವರವನ್ನು ಪಡೆಯುವದರ ಜತೆಗೆ ಹೆಸರು ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

ಮೈಕ್ರೋ ನ್ಯೂಸ್




# ಮಣ್ಣು ಕುಸಿದು ವ್ಯಕ್ತಿ ಸಾವು

**ಮೊದಲ ಪುಟದಿಂದ**
ಗ್ರಾಮದ ಸಿದ್ದೇಶ ಎಂಬುವರೊಂದಿಗೆ ಹೋಗಿದ್ದರು. ಹಳ್ಳದಲ್ಲಿ, ಎತ್ತಿನ ಬಂಡಿಗೆ ಮರಳು ತುಂಬುವ ಸಂದರ್ಭದಲ್ಲಿ ಆಕಸ್ಮಿಕವಾಗಿ ನನ್ನ ಗಂಡನ ಮತ್ತು ಸಿದ್ದೇಶ್ ಮೈ ಮೇಲೆ ಮಣ್ಣು ಕುಸಿದು ಬಿದಿದ್ದರಿಂದ, ನನ್ನ ಗಂಡ ಉಸಿರುಗಟ್ಟಿ ಸ್ಥಳದಲ್ಲಿಯೇ ಮೃತಪಟ್ಟಿದ್ದು, ಸಿದ್ದೇಶ್‌ನಿಗೆ ಗಾಯಗಳಾಗಿ ರುತ್ತವೆ ಎಂದು ತನ್ನ ಗಂಡನ ಸಾವಿನ ಬಗ್ಗೆ ಯಾರ ಮೇಲು ಯಾವುದೇ ಅನುಮಾನ ಇರುವುದಿಲ್ಲ ಮೃತನ ಪತ್ನಿ ಕೊಟ್ಟೂರು ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

# ಡಿ.30ರಂದು ವಿದ್ಯುತ್ ವ್ಯತ್ಯಯ

**ಹಂಪಿ ಟೈಮ್ಸ್ ಬಳ್ಳಾರಿ**
ಬಳ್ಳಾರಿ ಗ್ರಾಮೀಣ ಜೆಸ್ಕಾಂ ವ್ಯಾಪ್ತಿಯ ಕುಡುತಿನಿ-ಕಂಪ್ಲಿ ರಸ್ತೆಯಲ್ಲಿ ಬಿಟಿಪಿಎಸ್‌ನ 220ಕೆ.ವಿ ಹೊಸ ಮಾರ್ಗದ ನಿರ್ಮಾಣ ಕಾರ್ಯವನ್ನು ತುರ್ತಾಗಿ ಕೈಗೆತ್ತಿಕೊಳ್ಳುತ್ತಿರುವುದರಿಂದ 110/11ಕೆ.ವಿ ಕುಡುತಿನಿ ಉಪ-ವಿದ್ಯುತ್ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ 11ಕೆ.ವಿ ಮಾರ್ಗಗಳಲ್ಲಿ ಡಿ.30ರಂದು ಬೆಳಿಗ್ಗೆ 07 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಇಂಜಿನಿಯರ್ ಮೋಹನಬಾಬು ಅವರು ತಿಳಿಸಿದ್ದಾರೆ.

# ಇ ಕೆವೈಸಿ ಮಾಡಿಸಿದರೆ ಸಬ್ಸಿಡಿ ಕೇವಲ ವದಂತಿ: ಆಹಾರ ಇಲಾಖೆಯಿಂದ ಸ್ಪಷ್ಟೀಕರಣ

ಹಂಪಿ ಟೈಮ್ಸ್ ಕೊಪ್ಪಳ
ಗ್ಯಾಸ್ ಏಜೆನ್ಸಿಗಳಿಗೆ ದಿನಾಂಕ 31-12-2023ರ ಒಳಗಾಗಿ ಹೋಗಿ ಇ-ಕೆವೈಸಿ ಮಾಡಿಸಿದರೆ ಮಾತ್ರ ಸಬ್ಸಿಡಿ ಸಿಗುತ್ತದೆ ಮತ್ತು ಸಿಲೆಂಡರ್ ಸರಬರಾಜು ಮಾಡಲಾಗುತ್ತದೆ ಮತ್ತು ಇ-ಕೆವೈಸಿ ಕಾರ್ಯಾಕ್ಕೆ ಹಣ ನೀಡಬೇಕೆಂಬ ವದಂತಿಯು ಸಾರ್ವಜನಿಕ ವಲಯದಲ್ಲಿ ಗೊಂದಲ ಸೃಷ್ಠಿಗೆ ಕಾರಣವಾಗಿದೆ. ಈ ವಿಷಯವು ಕೇವಲ ವದಂತಿಯಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ಚಿದಾನಂದ ಕುರಿ ಅವರು ಸ್ಪಷ್ಟೀಕರಣ ನೀಡಿದ್ದಾರೆ.
ಅಡುಗೆ ಅನಿಲ ಗ್ರಾಹಕರು ತಮ್ಮ ಏಜೆನ್ಸಿಗೆ ತೆರಳಿ ಇ-ಕೆವೈಸಿ ನೀಡಬಹುದಾಗಿದೆ. ಅದು ಸಹ ಉಚಿತವಾಗಿ ನೀಡಬಹುದು. ಆದರೆ, ಕೇಂದ್ರ ಸರ್ಕಾರವು ಯಾವುದೇ ಕೊನೆಯ ದಿನಾಂಕವನ್ನು ನಿಗದಿಪಡಿಸಿರುವುದಿಲ್ಲ. ಉಜ್ವಲ ಯೋಜನೆಯ ಗ್ಯಾಸ್ ಸಂಪರ್ಕ ಪಡೆದಿರುವವರು ಇ-ಕೆವೈಸಿ ಮೊದಲು ಆದ್ಯತೆಯಾಗಿ ನೀಡಬೇಕಾಗಿದೆ. ಉಳಿದಂತೆ ಗ್ಯಾಸ್ ಸಂಪರ್ಕ ಹೊಂದಿರುವವರು ಆಧಾರ್ ಸಂಖ್ಯೆ ದಾಖಲೆಯೊಂದಿಗೆ ಸಂಬಂಧಿಸಿದ ಗ್ಯಾಸ್ ಏಜೆನ್ಸಿಗೆ ಭೇಟಿ ನೀಡಿ ಇ-ಕೆವೈಸಿ ನೀಡಬಹುದಾಗಿದೆ ಎಂದು ಆಹಾರ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತ ಮೇಲೆ ವಿನಾಃಕಾರಣ ಪ್ರಕರಣ ದಾಖಲು: ಎಸ್ಪಿಗೆ ಮನವಿ



**ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**
ಶನಿವಾರ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಸ್ಥಳೀಯ ಪತ್ರಕರ್ತ ಹಾಗೂ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷರಾದ ಬುಡ್ಡಿ ಬಸವರಾಜ್‌ರ ಮೇಲೆ ವಿನಾಕಾರಣ ಪ್ರಕರಣ ದಾಖಲಾಗಿರುವುದನ್ನು ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ ಖಂಡಿಸಿ, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರಿಗೂ ಮನವಿ ಸಲ್ಲಿಸಲಾಯಿತು.
ತಹಸೀಲ್ದಾರ್‌ರವರು ವಿನಾಕಾರಣ ತಾವು ಕರ್ತವ್ಯ ನಿರ್ವಹಿಸುತ್ತಿದ್ದಾಗ ಅಡ್ಡಿಪಡಿಸಿದ್ದಾರೆ ಎಂದು ಆರೋಪಿಸಿ ತಹಸೀಲ್ದಾರ್ ಚಂದ್ರಶೇಖರ್ ಶಂಬಣ್ಣ ಗಾಳಿಯವರೇ ಉದ್ದೇಶ ಪೂರಕವಾಗಿಯೇ ಪ್ರಕರಣ ದಾಖಲಸಿದ್ದಾರೆ. ಆರೋಪಿತ ವ್ಯಕ್ತಿ ಬುಡ್ಡಿ ಬಸವರಾಜ್ ನಡೆದಿರುವ ಪ್ರಕರಣಕ್ಕೂ ಇವರಿಗೂ ಯಾವುದೇ ಸಂಬಂಧವಿಲ್ಲ. ಅಲ್ಲದೆ, ನಡೆದಿರುವ ಘಟನೆಯ ಸ್ಥಳದಲ್ಲಿ ಅವರು ಇರಲೇ ಇಲ್ಲ. ಆದ್ದರಿಂದ ಹೋರಾಟದ ಮನೋಭಾವನೆಯಲ್ಲಿರುವ ಬುಡ್ಡಿ ಬಸವರಾಜ್‌ರವರ ಮೇಲೆ ಪ್ರಕರಣ ದಾಖಲಿಸುವ ಮೂಲಕ ಕಳಂಕದ ಮಸಿ ಬಳಿಯಲು ಈ ಯತ್ನ ನಡೆಸಿದೆ ಎಂದು ಆರೋಪಿಸಿದ ಸದಸ್ಯರು ಪ್ರಕರಣವನ್ನು ಮತ್ತೊಮ್ಮೆ ಸಂಪೂರ್ಣ ಪರಿಶೀಲಿಸಿ ಆರೋಪಿತ ಬಸವರಾಜ್‌ರವರಿಗೆ ನ್ಯಾಯ ಒದಗಿಸಿಕೊಡಬೇಕು ಎಂದು ಮನವಿಮಾಡಿಕೊಳ್ಳಲಾಗಿದೆ.
ಈ ವೇಳೆ ರಾಜ್ಯ ಕಾರ್ಯನಿರತ ಪತ್ರಕರ್ತರ ತಾಲೂಕು ಸಂಘದ ಅಧ್ಯಕ್ಷ ಉಮಾಪತಿ ಶೆಟ್ಟರ್, ಪದಧಿಕಾರಿಗಳಾದ ಜೆ.ನಾಗರಾಜ್, ವಿಶ್ವನಾಥ ಬಾವಿಕಟ್ಟಿ, ಅಶೋಕ ಉಪ್ಪಾರ್, ಸಿ.ಶಿವಾನಂದ, ಮಜ್ಜಿಗೆ ವೀರೇಶ, ಭೀಮರಾಜ್, ರಾಜುವಲಿ ಹಾಗೂ ಬಿ.ಕೆ.ಬಸವರಾಜ್ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.
ಪತ್ರಕರ್ತ ಬುಡ್ಡಿ ಬಸವರಾಜ್‌ರವರ ಮೇಲೆ ತಹಸೀಲ್ದಾರ್ ವಿನಾಕಾರಣ ಪ್ರಕರಣ ದಾಖಲಿಸಿದ್ದು, ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಹಗರಿಬೊಮ್ಮನಹಳ್ಳಿ ತಾಲೂಕಿಕು ಘಟಕದಿಂದ ಖಂಡಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಿದು.

# ಶ್ರೀ ಕ್ಷೇತ್ರ ಧರ್ಮಸ್ಥಳದವತಿಯಿಂದ ದೇವಸ್ಥಾನ ಜೀರ್ಣೋದ್ಧಾರಕ್ಕೆ 1.5 ಲಕ್ಷ ರೂ ಚೆಕ್ ವಿತರಣೆ



**ಹಂಪಿ ಟೈಮ್ಸ್ ಹೊಸಪೇಟೆ:** ತಾಲೂಕಿನ ಮರಿಯಮ್ಮನ ಹಳ್ಳಿ ವಲಯ ಗರಗ ಕಾರ್ಯಕ್ಷೇತ್ರದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಪರಮ ಪೂಜ್ಯರು ಮಂಜೂರಾತಿ ಮಾಡಿರುವ ದುರ್ಗಮ್ಮ ದೇವಸ್ಥಾನಕ್ಕೆ ಕ್ಷೇತ್ರದಿಂದ ಜೀರ್ಣೋದ್ಧಾರಕ್ಕೆ ಪ್ರಸಾದ ರೂಪದಲ್ಲಿ ಬಂದಂತಹ 1,50,000 ರೂ ಚೆಕ್‌ನ್ನು ಜಿಲ್ಲಾ ನಿರ್ದೇಶಕರಾದ ಸತೀಶ ಶೆಟ್ಟಿ ದೇವಸ್ಥಾನದ ಪದಾಧಿಕಾರಿಗಳಿಗೆ ಗುರುವಾರ ಹಸ್ತಾಂತರ ಮಾಡಿದರು. ಈ ಸಂದರ್ಭದಲ್ಲಿ ಯೋಜನಾಧಿಕಾರಿಗಳಾದ ಮಾರುತಿ, ಹಾಗೂ ಮೇಲ್ವಿಚಾರಕರಾದ ನಂದನ ಕುಮಾರ್, ದೇವಸ್ಥಾನದ ಟ್ರಸ್ಟ್ ಪದಾಧಿಕಾರಿಗಳಾದ ಅಂಜಿನಪ್ಪ, ರಮೇಶ್, ಎಸ್ ರಮೇಶ್, ಯರಿಸ್ವಾಮಿ ಹಾಗೂ ಒಕ್ಕೂಟದ ಅಧ್ಯಕ್ಷರಾದ ನೀಲಮ್ಮ ಹಾಗೂ ಸೇವಾ ಪ್ರತಿನಿಧಿಯ ಲಕ್ಷ್ಮಿ ಉಪಸ್ಥಿತರಿದ್ದರು.

# ಜ.1ರಂದು ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ

**ಹಂಪಿ ಟೈಮ್ಸ್ ಹೊಸಪೇಟೆ**
ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹೊಸಪೇಟೆ ನಗರಸಭೆ ಸಹಯೋಗದಲ್ಲಿ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಜನವರಿ 1ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಬಳ್ಳಾರಿ ರಸ್ತೆಯ ಕಾಳಿಕಮ್ಮ ದೇವಸ್ಥಾನದಲ್ಲಿ ಆಯೋಜಿಸಲಾಗಿದೆ.
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರು ಹಾಗೂ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಜೆಡ್ ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ವಿಜಯನಗರ ಶಾಸಕರಾದ ಹೆಚ್.ಆರ್.ಗವಿಯಪ್ಪ ಅವರು ಅಧ್ಯಕ್ಷತೆ ವಹಿಸುವರು.
ಮುಖ್ಯ ಅತಿಥಿಗಳಾಗಿ ಬಳ್ಳಾರಿ ಸಂಸದರಾದ ವೈ.ದೇವೇಂದ್ರಪ್ಪ, ದಾವಣಗೆರೆ ಸಂಸದರಾದ ಡಾ. ಜಿ.ಎಂ.ಸಿದ್ದೇಶ್ವರ, ಶಾಸಕರುಗಳಾದ ಕೆ.ನೇಮಿರಾಜ ನಾಯ್ಕ, ಡಾ ಎನ್.ಟಿ.ಶ್ರೀನಿವಾಸ್, ಎಲ್.ಕೃಷ್ಣ ನಾಯಕ, ಎಂ.ಪಿ.ಲತಾ ಮಲ್ಲಿಕಾರ್ಜುನ ಹಾಗೂ ಬಿ.ದೇವೇಂದ್ರಪ್ಪ, ವಿಧಾನ ಪರಿಷತ್ ಸದಸ್ಯರುಗಳಾದ ಡಾ.ಚಂದ್ರಶೇಖರ ಬಿ ಪಾಟೀಲ್, ಶಶಿಲ್ ಜಿ. ನಮೋಶಿ ಹಾಗೂ ವೈ.ಎಂ.ಸತೀಶ್, ಹೊಸಪೇಟೆ ನಗರಸಭೆ ಅಧ್ಯಕ್ಷೆ ಎ.ಲತಾ ಪಾಲ್ಗೊಳ್ಳುವರು.
ನಿವೃತ್ತ ಉಪನ್ಯಾಸಕ ನಾಗರಾಜ ಪತ್ತಾರ ಅವರು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸದಾಶಿವ ಪ್ರಭು ಬಿ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಹರಿ ಬಾಬು ಬಿ.ಎಲ್., ಅಪರ ಜಿಲ್ಲಾಧಿಕಾರಿ ಅನುರಾಧ ಜಿ. ಉಪಸ್ಥಿತರಿರುವರು.

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA